ವಿಜಯಪುರ | ಸಂಪುಟ 02 | ಸಂಚಿಕೆ 76 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶನಿವಾರ, ಮೇ 11, 2024

“ಶಿಕ್ಷಣ ವಂಚಿತ ಅನಾಥ ಮಕ್ಕಳು ನಿಮ್ಮ ಗಮನಕ್ಕೆ ಬಂದರೆ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಿ, ಇದಕ್ಕಿಂತ ಪುಣ್ಯದ ಸೇವೆ ಮತ್ತೊಂದಿರಲಾರದು. ಸಾಧ್ಯವಾದರೆ ಅಂತಹ ಮಕ್ಕಳನ್ನು ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್ ಗೆ ಪರಿಚಯಿಸುವ ಪುಣ್ಯದ ಕೆಲಸ ಮಾಡಿ”




– ಸಂಗಮೇಶ ಬಬಲೇಶ್ವರ
ಅಧ್ಯಕ್ಷರು, ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್, ವಿಜಯಪುರ

## ರಿಪಬ್ಲಿಕ್ ಟಿವಿ ಸಂದರ್ಶನದಲ್ಲಿ, ಭಾರತದ ಬಗ್ಗೆ ತಮ್ಮ ದೃಷ್ಟಿಕೋನವನ್ನು ಹಂಚಿಕೊಂಡ ಪ್ರಧಾನಿ ಮೋದಿ

# ಭಾರತ ಆಗ್ನೇಯ ಏಷ್ಯಾ ರಾಜಧಾನಿಯಾಗಲು ಬಯಸುವೆ :ಮೋದಿ

ನವದೆಹಲಿ: ಭಾರತ ಆಗ್ನೇಯ ಏಷ್ಯಾ ರಾಜಧಾನಿಯಾಗಬೇಕೆಂದು ಬಯಸುತ್ತೇನೆ ಎಂದಿರುವ ಪ್ರಧಾನಿ ನರೇಂದ್ರ ಮೋದಿ, ಭಾರತದ ಪ್ರಗತಿಯು ಯಾರಿಗೂ ಅಪಾಯವನ್ನುಂಟುಮಾಡುವುದಿಲ್ಲ ಮತ್ತು ಭಾರತ ಮುಂದುವರೆದಂತೆ, ಪ್ರಪಂಚದ ಹೊರೆ ಕಡಿಮೆಯಾಗುತ್ತದೆ ಎಂದು ಒತ್ತಿ ಹೇಳಿದ್ದಾರೆ.

ರಿಪಬ್ಲಿಕ್ ಟಿವಿ ಸಂದರ್ಶನದಲ್ಲಿ, ಪ್ರಧಾನಿ ಮೋದಿ ಅವರು ಭಾರತದ ಬಗ್ಗೆ ತಮ್ಮ ದೃಷ್ಟಿಕೋನವನ್ನು ಹಂಚಿಕೊಂಡರು ಮತ್ತು ಭಾರತ ಆಗ್ನೇಯ ಏಷ್ಯಾದ ರಾಜಧಾನಿಯಾಗಲು ಏಕೆ ಸಾಧ್ಯವಿಲ್ಲ ಎಂದು ಕೇಳಿದರು.

ಈಗ ಭಾರತ ಆಗ್ನೇಯ ಏಷ್ಯಾದ ರಾಜಧಾನಿಯಾಗಬೇಕೆಂದು ನಾನು ಬಯಸುತ್ತೇನೆ ಮತ್ತು ನಾವು ಏಕೆ ಆ ಮನೋಭಾವವನ್ನು ಹೊಂದಿರಬಾರದು? ಪ್ರಪಂಚದ ಎಲ್ಲಾ ದೇಶಗಳು ನಮ್ಮೊಂದಿಗೆ ಸೇರಲು ಏಕೆ ಬಯಸಬಾರದು? ಎಂದು ಕೇಳಿದ ಪ್ರಧಾನಿ, ಕೋಲ್ಕತ್ತಾ



ಮತ್ತು ಗುವಾಹಟಿ ಬಹಳ ದೊಡ್ಡ ಕೇಂದ್ರಗಳಾಗಬಹುದು ಎಂದು ಹೇಳಿದರು.

ನಾವು ದೈಹಿಕವಾಗಿ ತುಂಬಾ ಹತ್ತಿರವಾಗಿದ್ದೇವೆ. ಗುವಾಹಟಿ ಅಥವಾ ಕೋಲ್ಕತ್ತಾ ಬಹಳ ದೊಡ್ಡ ಕೇಂದ್ರಗಳಾಗಬಹುದು. ಕೋಲ್ಕತ್ತಾವನ್ನು ಇಡೀ ಆಗ್ನೇಯ ಏಷ್ಯಾಕ್ಕೆ ಏಕೆ ದೊಡ್ಡ ಆಕರ್ಷಕ ಸ್ಥಳವನ್ನಾಗಿ ಮಾಡಬಾರದು? ಆ ದಿಕ್ಕಿನಲ್ಲಿ ಯೋಚಿಸುತ್ತೇನೆ ಮತ್ತು ಭಾರತದ ಪ್ರಗತಿಯು ಯಾರಿಗೂ ಅಪಾಯವನ್ನುಂಟು ಮಾಡುವುದಿಲ್ಲ ಎಂದು ಭಾವಿಸುತ್ತೇನೆ. ಭಾರತ ಬಲಿಷ್ಠವಾದಾಗ ಜಗತ್ತು ಕೂಡಾ ಉತ್ತಮ ಎಂದು ಭಾವಿಸುತ್ತದೆ. ಭಾರತವು ಪ್ರಗತಿಯಾದಂತೆ ಪ್ರಪಂಚದ ಹೊರೆ ಕಡಿಮೆಯಾಗುತ್ತದೆ ಎಂದು ಪ್ರಧಾನಿ ಮೋದಿ ಹೇಳಿದರು.

“ಭಾರತವು ಶಕ್ತಿಯುತವಾದಾಗ, ಜಗತ್ತು ಚಿಂತಿಸುವುದಿಲ್ಲ, ಜಗತ್ತು ಉತ್ತಮವಾಗಿಯೇ ಭಾವಿಸುತ್ತದೆ ಎಂದು ಹೇಳಿದ ಪ್ರಧಾನಿ ಮೋದಿ, ಹೆಚ್ಚಿದ ಜಿಡಿಪಿ ಮತ್ತು ತಲಾ ಆದಾಯ ಸೇರಿದಂತೆ ಭಾರತದ ಸಾಧನೆಗಳನ್ನು ಅವರು ಹಂಚಿಕೊಂಡರು.ಈಗ ಜಿಡಿಪಿ, ತಲಾ ಆದಾಯವನ್ನು ಹೆಚ್ಚಿಸುತ್ತಿದ್ದೇವೆ ಮತ್ತು ಸೌರಶಕ್ತಿ ಉತ್ಪಾದನೆ ಮಾಡುತ್ತಿದ್ದು, ವಿಶ್ವದ ಆರ್ಥಿಕತೆಯಲ್ಲಿ ಭಾರತದ ಗೌರವ ಹೆಚ್ಚಾಗಿದೆ ಎಂದು ಪ್ರಧಾನಿ ತಿಳಿಸಿದರು.

### ರಾಜ ನುಡಿ

ಯೋಚಿಸಿ ನೋಡಿ
ನೆನಪುಗಳು ಯಾವಾಗಲೂ
ಸಮಯದ ವಿರುದ್ಧ ದಿಕ್ಕಿಗೆ
ಹರಿಯುತ್ತವೆ. ನೀವು
ನೆನಪುಗಳಲ್ಲಿ ಮುಳುಗಿ
ಹಿಮ್ಮುಖವಾಗಿ ಚಲಿಸಿ
ಅಲ್ಲಿಯೇ ಕುಳಿತರೆ
ಸಮಯ ನಿಮ್ಮನ್ನು
ಅಲ್ಲಿಯೇ ಬಿಟ್ಟು ಮುಂದೆ
ಸಾಗುತ್ತಲೇ ಇರುತ್ತದೆ.
ಇದನ್ನು ಅರಿತಾಗ ಮಾತ್ರ
ಜೀವನ ಗೆಲ್ಲುತ್ತೇವೆ.

–ಡಾ. ರಾಜಶೇಖರ ನಾಗೂರ

## ದೆಹಲಿ ಅಬಕಾರಿ ನೀತಿ ಹಗರಣದಲ್ಲಿ ಜೈಲು ಪಾಲಾಗಿದ್ದ ಕೇಜ್ರಿವಾಲ್ ಗೆ ರಿಲೀಫ್ ನೀಡಿದ ಸುಪ್ರೀಂ ಕೋರ್ಟ್

# ದೆಹಲಿ ಸಿಎಂ ಕೇಜ್ರಿವಾಲ್ ಗೆ ಮಧ್ಯಂತರ ಜಾಮೀನು ಮಂಜೂರು

**ಉದಯರಶ್ಮಿ ನ್ಯೂಸ್**

ನವದೆಹಲಿ: ದೆಹಲಿ ಅಬಕಾರಿ ನೀತಿ ಹಗರಣದಲ್ಲಿ ಜೈಲು ಪಾಲಾಗಿದ್ದ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಗೆ ಕೊನೆಗೂ ಸುಪ್ರೀಂ ಕೋರ್ಟ್ ರಿಲೀಫ್ ನೀಡಿದ್ದು, ಅವರಿಗೆ ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ದೆಹಲಿ ಅಬಕಾರಿ ನೀತಿ ಹಗರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೆ ಒಳಗಾಗಿರುವ ಸಿಎಂ ಅರವಿಂದ್ ಕೇಜ್ರಿವಾಲ್ ಅವರಿಗೆ ಕೊನೆಗೂ ಜಾಮೀನು ದೊರಕಿದ್ದು, ಕೇಜ್ರಿವಾಲ್ ಅವರ ಮಧ್ಯಂತರ ಜಾಮೀನು ಕುರಿತು ಸುಪ್ರೀಂ ಕೋರ್ಟ್ ಇಂದು ತನ್ನ ಆದೇಶವನ್ನು ನೀಡಿದೆ.

ಜೂನ್ 1 ರವರೆಗೆ ಅವರಿಗೆ ಮಧ್ಯಂತರ ಜಾಮೀನು ನೀಡಿದ್ದು, ಇದ–ರಿಂದ ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಕೇಜ್ರಿವಾಲ್ ಲೋಕಸಭೆ ಚುನಾವಣೆ ಪ್ರಚಾರದಲ್ಲಿ ಭಾಗವಹಿಸಲು ಅವಕಾಶ ಸಿಕ್ಕಂತಾಗಿದೆ.

ಸುಪ್ರೀಂ ಕೋರ್ಟ್ ನೀಡಿರುವ ಮಧ್ಯಂತರ ಜಾಮೀನಿಂದ ಆಮ್ ಆದ್ಮಿ ಪಕ್ಷ ಹಾಗೂ ದಿಲ್ಲಿ ಸರ್ಕಾರಕ್ಕೆ ದೊಡ್ಡ ನಿರಾಳತೆ ಕೊಟ್ಟಿದೆ. ಆದ–’ರೆ ಅರವಿಂದ್ ಕೇಜ್ರಿವಾಲ್ ಅವರು ಆಡಳಿತಕ್ಕೆ ಸಂಬಂಧಿಸಿದ ಚಟುವಟಿ–ಕೆಗಳಲ್ಲಿ ಭಾಗವಹಿಸಲು ಅವಕಾಶವಿಲ್ಲ. ಮುಂದಿನ 20 ದಿನ ಅವರು ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ ಪ್ರಚಾರ ಕಾರ್ಯಗಳಲ್ಲಿ ಭಾಗವಹಿಸಬಹುದಾಗಿದೆ.



ಜೂನ್ 1ರಂದು ಲೋಕಸಭೆ ಚುನಾವಣೆಯ ಕೊನೆಯ ಹಾಗೂ ಏಳನೇ ಹಂತದ ಚುನಾವಣೆ ನಡೆಯಲಿದೆ. ಅಲ್ಲಿಯವರೆಗೂ ಕೇಜ್ರಿವಾಲ್ ಅವರು ಚುನಾವಣೆಗೆ ಸಂಬಂಧಿಸಿದ ಪ್ರಚಾರ ಕಾರ್ಯಗಳಲ್ಲಿ ಭಾಗಿಯಾಗಬಹುದು. ಜೂನ್ 2ರಂದು ಅವರು ಜೈಲಿನ ಅಧಿಕಾರಿಗಳ ಮುಂದೆ ಶರಣಾಗಬೇಕು ಎಂದು ಕೋರ್ಟ್ ಸೂಚನೆ ನೀಡಿದೆ.

ಅಂತೆಯೇ ಮಾರ್ಚ್ 21ರಂದು ಬಂಧನಕ್ಕೆ ಒಳಗಾದ ಬಳಿಕ ಜಾರಿ ನಿರ್ದೇಶನಾಲಯದ ಲಾಕಪ್ ಹಾಗೂ ತಿಹಾರ್ ಜೈಲಿನಲ್ಲಿ ಸುಮಾರು 50 ದಿನಗಳನ್ನು ಕಳೆದಿದ್ದರು.

## ಬಸವೇಶ್ವರ ಪುತ್ಥಳಿಗೆ ಗೌರವ ನಮನ



**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಹೃದಯಭಾಗದಲ್ಲಿರುವ ಜಗಜ್ಯೋತಿ ಬಸವೇಶ್ವರ ಪುತ್ಥಳಿಗೆ ಶುಕ್ರವಾರ ಬಸವ ಜಯಂತಿಯಂದು ಜಿಲ್ಲಾ ಪಂಚಾಯತ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಮತ್ತು ವಿಜಯಪುರ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರಿಷಿಕೇಶ ಸೋನಾವಣೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

# ಅಶ್ಲೀಲ ವಿಡಿಯೋ ಪೆನ್ ಡ್ರೈವ್ ಹಂಚಿದ ಜಿ.ದೇವರಾಜೇಗೌಡ ಬಂಧನ

**ಉದಯರಶ್ಮಿ ನ್ಯೂಸ್**

ಚಿತ್ರದುರ್ಗ: ಹಾಸನ ಸಂಸದ ಪ್ರಜ್ವಲ್ ರೇವಣ್ಣ ರಾಸಲೀಲೆ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಪೆನ್ ಡ್ರೈವ್ ಬಿಡುಗಡೆ ಮಾಡಿದ್ದ ವಕೀಲ ಮತ್ತು ಬಿಜೆಪಿ ಮುಖಂಡ ಜಿ.ದೇವರಾಜೇಗೌಡ ಅವರನ್ನು ಹಿರಿಯೂರು ಗ್ರಾಮಾಂತರ ಪೊಲಿಸರು ಶುಕ್ರವಾರ ರಾತ್ರಿ ಬಂಧಿಸಿದ್ದಾರೆ.

ವಕೀಲ ದೇವರಾಜೆಗೌಡ ಮೇಲೆ




ಮಹಿಳೆಯೊಬ್ಬರು ಲೈಂಗಿಕ ಕಿರುಕುಳ ಆರೋಪ ಮಾಡಿದ್ದರು. ಹೀಗಾಗಿ ಇವರ ವಿರುದ್ಧ ಪ್ರಕರಣ ದಾಖಲಾಗಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ತಲೆಮರೆಸಿಕೊಂಡಿದ್ದರು. ಈ ಬಗ್ಗೆ ಹೊಳೆನರಸೀಪುರ ಪೊಲಿಸರು ಹಿರಿಯೂರು ತಾಲೂಕಿನ ಗೂಯಿಲಾಳು ಟೋಲ್ ಬಳಿ ಆರೋಪಿ ಇರುವ ಖಚಿತ ಮಾಹಿತಿ ಪಡೆದು ಶುಕ್ರವಾರ ಬಂಧಿಸಿದ್ದಾರೆ.

ಹಿರಿಯೂರು ಗ್ರಾಮಾಂತರ ಸಿಪಿಐ ಕಾಳಿಕೃಷ್ಣ ನೇತೃತ್ವದ ಪೊಲೀಸರ ತಂಡ ಕಾರ್ಯಾಚರಣೆ ನಡೆಸಿ ದೇವರಾಜೇಗೌಡರನ್ನು ವಶಕ್ಕೆ ಪಡೆದಿದೆ.

ಇವರ ವಿರುದ್ಧ ಹಾಸನ ಮೂಲದ 36 ವರ್ಷದ ಮಹಿಳೆ ತಮ್ಮ ಆಸ್ತಿ ಮಾರಾಟಕ್ಕೆ ಸಹಾಯ ಮಾಡುವ ನೆಪದಲ್ಲಿ ದೇವರಾಜೇಗೌಡ ಲೈಂಗಿಕ ಕಿರುಕುಳ ಕೊಟ್ಟಿದ್ದರು ಎಂದು ಆರೋಪಿಸಿದ್ದಾರೆ. ಆಗಾಗ ವಿಡಿಯೋ ಕರೆ ಮಾಡಿ ಅಂಗಾಂಗ ತೋರಿಸುವಂತೆ ಪೀಡಿಸಿ ಮಾನಸಿಕ ಕಿರುಕುಳ ಕೊಟ್ಟಿದ್ದಾರೆ ಎಂದು ದೂರಿನಲ್ಲಿ ಅವರು ತಿಳಿಸಿದ್ದಾರೆ.

### ವಚನ ಚಿಂತನ 377



*ನೀರಿನ ಮೇಲೆ ಧರೆ ಹೊರೆಯಾಗಿ*
*ಮತ್ತಾ ನೀರನಾಶ್ರಯಿಸಿಕೊಂಡಿಪ್ಪಂತೆ,*
*ಬೀಜದ ಸಾರ ಬಲಿದು ಬೀಜವಾಗಿ*
*ಆ ಸಾರ ಬೀಜವನಿಂಬಿಟ್ಟುಕೊಂಡಿಪ್ಪಂತೆ,*
*ನಿರವಯವಸ್ತು ಕುರುಹಾಗಿ*
*ಆ ಕುರುಹಿಂಗೆ ತಾನರಿವಾಗಿ ಭಾವಿಸಿಕೊಂಬಂತೆ,*
*ದರ್ಪಣದಲ್ಲಿ ತನ್ನೊಪ್ಪವ ಕಾಣಿಸಿಕೊಂಬ ದೃಕ್ಕು*
*ದರ್ಪಣದಿಂದೆಂದಡೆ ನಿಶ್ಚಯವಲ್ಲ;*
*ದೃಕ್ಕಿನಿಂದೆಂದಡೆ ಇದಿರಿಟ್ಟು ಲಕ್ಷಿಸಬೇಕು.*
*ಇದು ಭಿನ್ನವಲ್ಲ, ಅಭಿನ್ನವಲ್ಲ ಕ್ರಿಯೆಯಲ್ಲ,*
*ನಿಃಕ್ರಿಯೆಯಲ್ಲ ಇದು ಭಿನ್ನವಲ್ಲ,*
*ನಿರ್ಭಾವವಲ್ಲ.*
*ಅಹುದು ಅಲ್ಲವೆಂಬ ಸಂದೇಹ ಸಂಧಿಸಿ*
*ನಿಂದಲ್ಲಿಎನ್ನಯ್ಯಪ್ರಿಯ ಇಮ್ಮಡಿ ನಿಃಕಳಂಕಮಲ್ಲಿಕಾರ್ಜುನನುಸ್ವಯವಾದ*
*ಸಂಬಂಧಸ್ಥಲ.*

ಯಾವುದು ಮಿತ್ಯ ಯಾವುದು ಸತ್ಯ ಎನ್ನುವುದನ್ನು ಅರಿತುಕೊಂಡು, ಮಿತ್ಯದಮರೆಯಲ್ಲಿ ಅಡಗಿರುವ ಸತ್ವವನ್ನು ಅರಿಯುವುದೇಸ್ವಯ ಸಂಬಂಧಸ್ಥಲ ಎಂದು ಮೋಳಗಿ ಮಹಾದೇವಿಯವರು ಈ ವಚನ ದಲ್ಲಿ ಸ್ಪಷ್ಟಪಡಿಸಿದ್ದಾರೆ. ಭೂಮಿಯಿಂದ ಹುಟ್ಟಿದ ನೀರು( ಊ2+ಓ) ಭೂಮಿಯನ್ನೆಲ್ಲ ಆವ–ರಿಸುವಂತೆ, ಬೀಜದಿಂದ ಉಂಟಾದ ಮರದ ಎಲ್ಲ ಸತ್ವವು ಪುನ: ಬೀಜದಲ್ಲಿ ಅಡಗುವಂತೆ, ಕುರುಹಿನಲ್ಲಿ ಅರಿವು ಇಂಬುಗೊಂಡು ಕುರುಹಿನ (ಇಷ್ಟಲಿಂಗ) ಮೂಲಕ ಅರಿವು ಜಾಗೃತಿ ಕೊಳ್ಳುವುದು, ಆದರೆ ಕುರುಹನ್ನೇ ಅರಿವು ಎಂದು ತಪ್ಪು ತಿಳಿಯುವ ಸಾಧ್ಯತೆಗಳುಂಟು , ಹೇಗೆಂದರೆ ದರ್ಪಣದಲ್ಲಿ ಕಾಣುವ ಪ್ರತಿಬಿಂಬವನ್ನು ಸತ್ಯ ಎಂದು ಭಾವಿಸುವಂತೆ.ಕಾರಣ “ದೃಕ್ಕಿನಿಂದೆಂದಡೆ ಇದಿರಿಟ್ಟು ಲಕ್ಷಿಸಬೇಕು.”ಎಂದಿದ್ದಾರೆ. ಅಂದು (ಇಂದು ಸಹ) ದೇವರ ಬಗ್ಗೆ ಇರುವ ತಪ್ಪು ತಿಳುವಳಿಕೆಯನ್ನು ಹೋಗಲಾಡಿಸಲು ಶರಣರು ಪ್ರಯತ್ನಿಸಿರುವುದನ್ನು ಈ ವಚನ ದಲ್ಲಿ ನಾವು ಕಾಣುತ್ತೇವೆ. ಕುರುಹಿನ ಆಚೆಯ ಅರಿವು ಕಾಣೋಣ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ವಿದ್ಯಾರ್ಥಿಯೊಬ್ಬನನ್ನು ಶೈಕ್ಷಣಿಕ ದತ್ತು ಪಡೆದು ಬಸವ ಜಯಂತಿ ಆಚರಿಸಿದ ದಂಪತಿ

# ಮಾನವೀಯ ಕಳಕಳಿ ಮೆರೆದ ಸಂಗಮೇಶ ಬಬಲೇಶ್ವರ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್ ನ ಕಾರ್ಯಾಲಯದಲ್ಲಿ ವಿದ್ಯಾರ್ಥಿಯೊಬ್ಬನನ್ನು ಶೈಕ್ಷಣಿಕ ದತ್ತು ಪಡೆದು ಬಸವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿದ ಸಂಗಮೇಶ ಬಬಲೇಶ್ವರ ದಂಪತಿ ಮಾನವೀಯ ಕಳಕಳಿ ಮೆರೆದು ಇತರರಿಗೆ ಮಾದರಿಯಾಗಿದ್ದಾರೆ.

ಶುಕ್ರವಾರ ಆಯೋಜಿಸಲಾದ ಈ ಕಾರ್ಯಕ್ರಮಕ್ಕೆ ಅತಿಥಿಯನ್ನಾಗಿ ಕು.ಅಭಿಷೇಕ ಅಶೋಕ್ ಜಾದವ ಆಗಮಿಸಿದ್ದರು. ನಾಲ್ಕು ತಿಂಗಳ ಹಿಂದೆ ತಾಯಿಯನ್ನು ನಾಲ್ಕು ವರ್ಷದ ಹಿಂದೆ ತಂದೆಯನ್ನು ಕಳೆದುಕೊಂಡಿರುವ ಅಭಿಷೇಕ ತನ್ನ ಶಿಕ್ಷಣವನ್ನ ಮುಂದುವ–ರಿಸುವುದು ಹೇಗೆ ಎಂಬ ಚಿಂತೆಯಲ್ಲಿರುವ ಸಂದರ್ಭದಲ್ಲಿಯೇ ಅಂತಹ ಮಕ್ಕಳನ್ನು ಗುರುತಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವ ಅಮ್ಮನ ಮಡಿಲು ಚಾ–ರಿಟೇಬಲ್ ಟ್ರಸ್ಟ್ ನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರಿಗೆ ಅವರ ಧರ್ಮಪತ್ನಿ ಶ್ವೇತಾ ಬಬಲೇಶ್ವರವರು “ ನಮ್ಮ ಮನೆಗೆ ಬರುವ ಅಜ್ಜಿಯೊಬ್ಬರು ಹೇಳುತ್ತಿದ್ದರು ಇದೇ ಸಂಗಮೇಶ್ವರ ಕಾಲೋನಿಯಲ್ಲಿಯೇ ಒಬ್ಬ ಮಗು ತಂದೆ ತಾಯಿಯನ್ನು ಕಳೆದುಕೊಂಡು ಮುಂದಿನ ಶಿಕ್ಷಣಕ್ಕಾಗಿ ತೊಂದರೆ ಅನುಭವಿಸುತ್ತಿರುವುದಾಗಿ ತಿಳಿಸಿದ್ದಾರೆ. ಆ ಮಗುವನ್ನು ಇಂದು ಹುಡುಕಿ ಕರೆದುಕೊಂಡು ಬಂದು ಬಸವ



ಜಯಂತಿಯ ಈ ಶುಭದಿನದಂದೆ ಆತನ ಶೈಕ್ಷಣಿಕ ವೆಚ್ಚದ ಜವಾಬ್ದಾರಿ ಹೊತ್ತುಕೊಳ್ಳೋಣ” ಎಂದು ತಿಳಿಸಿದಾಗ ಸಂಗಮೇಶ್ವರ ದೇವಾಲಯದ ಅರ್ಚಕ ಸಿದ್ದರಾಮಯ್ಯ ಹಿರೇಮಠ ಅವರಿಗೆ ಸಂಗಮೇಶ್ ಬಬಲೇಶ್ವರವರು ಕರೆ ಮಾಡಿ, “ಆ ಮಗು ಯಾರು? ಆತ ಎಲ್ಲಿರುತ್ತಾನೆ? ಆತನನ್ನು ಕರೆದುಕೊಂಡು ಬನ್ನಿ ಎಂದು ತಿಳಿಸಿದ್ದಾರೆ. ಒಂದು ಗಂಟೆಯಲ್ಲಿ ಆ ಮಗುವನ್ನು ಕರೆದುಕೊಂಡು ಸಿದ್ದರಾಮಯ್ಯ ಹಿರೇಮಠ ಅವರು ಅಭಿಷೇಕನನ್ನು, ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್ ಗೆ ಕರೆದುಕೊಂಡು ಬಂದಾಗ, ಆ ಮಗುವನ್ನೇ ಬಸವ ಜಯಂತಿಯ ಮುಖ್ಯ ಅತಿಥಿಯನ್ನಾಗಿ ಮಾಡಿ, ಅಭಿಷೇಕನ ಮುಂದಿನ ಶೈಕ್ಷಣಿಕ ವೆಚ್ಚವನ್ನು ಇದೇ ದಿನ ಆತನಿಗೆ ಅರ್ಚಕ ಸಿದ್ದರಾಮಯ್ಯ ಹಿರೇಮಠರ ಮೂಲಕ ಶೈಕ್ಷಣಿಕ ವೆಚ್ಚದ ಸಂಪೂರ್ಣ ಹಣವನ್ನು ಅಭಿಷೇಕನಿಗೆ ಹಸ್ತಾಂತರಿಸುವ ಮೂಲಕ ಆತನ ಶೈಕ್ಷಣಿಕ ಜವಾಬ್ದಾರಿಯನ್ನು ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್ ವಹಿಸಿಕೊಂಡಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್ ನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಮಾತನಾಡಿ “ ತಂದೆ ತಾಯಿ ಇಲ್ಲದ ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ನನ್ನ ಬದುಕಿನ ಬಹು ಮುಖ್ಯ ಜವಾಬ್ದಾರಿಯಾಗಿದೆ. ಈ ಸೇವಾ ಕಾರ್ಯದಲ್ಲಿ ಸಿಗುವ ಆತ್ಮತೃಪ್ತಿ ನನಗೆ ಬೇರೆ ಯಾವುದರಲ್ಲೂ ಇಲ್ಲ. ಯಾಕೆಂದರೆ ತಂದೆ ತಾಯಿ ಕಳೆದುಕೊಂಡು ಬದುಕು ಕಟ್ಟಿಕೊಂಡವನು ನಾನು, ಅಂತಹ ಮಕ್ಕಳ ನೋವಿನ ಬದುಕು ಹೇಗಿರುತ್ತೆ ಎನ್ನುವುದು ಎಲ್ಲರಿಗಿಂತ ಚೆನ್ನಾಗಿ ನನಗೆ ಅರ್ಥವಾಗುತ್ತದೆ. ಪ್ರತಿ ವರ್ಷ ನಾವು ಹಲವಾರು ವಿದ್ಯಾರ್ಥಿಗಳನ್ನು ಶೈಕ್ಷಣಿಕ ದತ್ತು ಪಡೆದುಕೊಂಡರೂ ಅದನ್ನು ಯಾವುದೇ ಸಾಮಾಜಿಕ ಜಾಲತಾಣ ಮತ್ತು ಮಾಧ್ಯಮಗಳೊಂದಿಗೆ ಹಂಚಿಕೊಳ್ಳುವದಿಲ್ಲ. ಹಂಚಿಕೊಂಡು ಪ್ರಚಾರ ಪಡೆಯುವ ಉದ್ದೇಶ ನಮ್ಮದಲ್ಲ, ಅದರ ಅಗತ್ಯವೂ ನಮಗಿಲ್ಲ. ಆದರೆ ಇಂದು ಇದನ್ನು ಯಾಕೆ ತಮ್ಮೊಂದಿಗೆ ಹಂಚಿಕೊಳ್ಳುತ್ತಿದ್ದೇನೆ ಎಂದರೆ, ನಮ್ಮ ಮನೆಗೆ ಬರುವ ಅಜ್ಜಿ ಒಬ್ಬರ ಮೂಲಕ ಈ ವಿಷಯ ತಿಳಿದಿರದಿದ್ದರೆ ಅಭಿಷೇಕನ ಸೇವೆ ಮಾಡುವ ಸೌಭಾಗ್ಯ ನಮಗೆ ದೊರೆಯುತ್ತಿರಲಿಲ್ಲ. ಈ ಮೂಲಕ ಬಸವ ಜಯಂತಿ ದಿವಸ ನಾನು ತಮ್ಮಲ್ಲಿ ಕಳಕಳಿಯ ಪ್ರಾರ್ಥನೆ ಮಾಡುವುದೇನೆಂದರೆ “ ನಿಮ್ಮ ನಿಮ್ಮ ಊರು, ಓಣಿಗಳಲ್ಲಿ ಇಂಥಹ ಮಕ್ಕಳು ನಿಮ್ಮ ಗಮನಕ್ಕೆ ಬಂದರೆ ಅವರನ್ನ ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಿ, ಇದಕ್ಕಿಂತ ಪುಣ್ಯದ ಸೇವೆ, ಭಗವಂತನ ಸೇವೆ, ಬಸವ ಸೇವೆ ಮತ್ತೊಂದಿರಲಾರದು ಎಂದು ನಾನು ಭಾವಿಸಿದ್ದೇನೆ. ಸಾಧ್ಯವಾದರೆ ಅಂತಹ ಮಕ್ಕಳನ್ನು ನಮ್ಮ ಅಮ್ಮನ ಮಡಿಲು ಚಾರಿಟೇಬಲ್ ಟ್ರಸ್ಟ್ ಗೆ ಪರಿಚಯಿಸುವ ಪುಣ್ಯದ ಕೆಲಸ ಮಾಡಿ ಎಂದು ಸಂಗಮೇಶ ಬಬಲೇಶ್ವರ ವಿನಂತಿಸಿಕೊಂಡಿದ್ದಾರೆ. ಇದೇ ಸಂದರ್ಭದಲ್ಲಿ ಸಂಗಮೇಶ್ ಬಬಲೇಶ್ವರ ದಂಪತಿ ಅಭಿಷೇಕನ ಬದುಕು ಉಜ್ವಲವಾಗಲೆಂದು ಶುಭ ಹಾರೈಸಿದ್ದಾರೆ.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಹಿರೇಮಠ, ಪ್ರದೀಪ್ ಲಿಂಗದಳ್ಳಿ ಮೊದಲಾದವರು ಉಪಸ್ಥಿತರಿದ್ದರು.

# ಬಸವಣ್ಣ ವಿಶ್ವದ ಶ್ರೇಷ್ಠ ದಾರ್ಶನಿಕ :ಸಾಹಿತಿ ಬೈಚಬಾಳ



**ಉದಯರಶ್ಮಿ ನ್ಯೂಸ್**

ವಿಜಯಪುರ: ಕಾಶ್ಮೀರದ ಅರಸ ಪರ್ಷಿಯನ್ ಭಾಷೆ ಬಿಟ್ಟು ಕನ್ನಡ ಕಲಿತು ಶ್ರೇಷ್ಠ ವಚನಕಾರನೆನಿಸಲು ಬಸವಣ್ಣನವರ ನಡೆ – ನುಡಿಗಳೆ ಕಾರಣವಾದವು. ಧಾರ್ಮಿಕ ಜಿಡ್ಡು ತೊಳೆದು ವೈಚಾರಿಕ ನೆಲೆಗಟ್ಟಿನಲ್ಲಿ. ಲಿಂಗಾಯತ ಸಮಾಜ ನಿರ್ಮಿಸಿದ ಬಸವಣ್ಣ ವಿಶ್ವದ ಶ್ರೇಷ್ಠ ದಾರ್ಶನಿಕ ಎನಿಸಿದ್ದಾನೆ ಎಂದು ಜನಪದ ಸಾಹಿತಿ ಶಂಕರ ಬೈಚಬಾಳ ಹೇಳಿದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕದ ಆಶ್ರಯದಲ್ಲಿ ನಗರದ ಪರಿಷತ್ ಕಾರ್ಯಾಲಯದಲ್ಲಿ ಬಸವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಸವಾದಿ ಶಿವಶರಣರು ಜನಪದರ ಆಡು ನುಡಿಯಲ್ಲಿ ವಚನ ಬರೆದು ಜನಪದ ಸಾಹಿತ್ಯ ರಕ್ಷಿಸಿದರು . ವಚನ ಸಾಹಿತ್ಯ ಗ್ರಾಮೀಣ ಬದುಕಿನ ಪ್ರತಿಬಿಂಬವಾಗಿ ಕಾಣುತ್ತಿದೆ ಎಂದು ಹೇಳಿದರು.

“ ಸಾಮರಸ್ಯದ ಬದುಕಿಗೆ ಶರಣರ ವಚನಗಳು “ ಕುರಿತು ಉಪನ್ಯಾಸ ನೀಡಿದ ಚಿಂತಕ ಮೋಹನ ಕಟ್ಟಿಮನಿ, ಸತ್ಕಾರ್ಯ–ಸದ್ವಿಚಾರದ ಮೂಲಕ ಬಸವಣ್ಣನವರು ಸಮಾನತೆಯ ಸಮಾಜ ನಿರ್ಮಿಸುವ ಕನಸು ಕಂಡರು. ಶರಣರ ಸಹಕಾರದಿಂದ ವಚನ ಚಳುವಳಿ ನಡೆಸಿದರು. ಬಸವಣ್ಣನವರ ವಿಚಾರಧಾರೆಗಳು ಮೈಗೂಡಿಸಿಕೊಂಡು ನಡೆದರೆ ಬದುಕು ಸುಂದರವಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ ಬಸವಣ್ಣನವರು ಕೇವಲ ಸಾಂಸ್ಕೃತಿಕ ನಾಯಕ ಅಷ್ಟೆ ಅಲ್ಲ. ಅವರೊಬ್ಬ ನಾಗರಿಕ ಸಮಾಜದ ನಿರ್ಮಾಪಕ. ಜಗತ್ತಿನ ಸಮಾನತೆಯ ಹರಿಕಾರ ಎಂದು ಹೇಳಿದರು.

ಕ ಜಾ ಪ ತಿಕೋಟಾ ತಾಲೂಕು ಗೌರವಾಧ್ಯಕ್ಷ ಬಾಬುರಾವ್ ಮಹಾರಾಜರು ಸಾನಿಧ್ಯ ವಹಿಸಿದ್ದರು. ಕರ್ನಾಟಕ ಬಯಲಾಟ ಅಕಾಡೆಮಿ ಸದಸ್ಯೆ ಶ್ರೀಮತಿ ಅನಸೂಯಾ ವಡ್ಡರ, ಕ ಜಾ ಪ ಜಿಲ್ಲಾ ಖಜಾಂಚಿ ಪ್ರೊ ಎಸ್ ಎಲ್ ಮೇತ್ರಿ, ಇಂಡಿ ತಾಲೂಕಾಧ್ಯಕ್ಷ ರಾಜಶೇಖರ ಪಾಟೀಲ, ಮುದ್ದೇಬಿಹಾಳ ತಾಲೂಕಾಧ್ಯಕ್ಷ ಎ ಆರ್ ಮುಲ್ಲಾ, ವಿಜಯಪುರ ತಾಲೂಕಾಧ್ಯಕ್ಷ ವೈ ಎಚ್ ಪವಾರ , ವಲಯ ಅಧ್ಯಕ್ಷರಾದ ಸಿದರಾಯ ಬಡಿಗೇರ, ಶಿವಾನಂದ ಮಳ್ಳಿ ಉಪಸ್ಥಿತರಿದ್ದರು.

ಜಿಲ್ಲಾ ಘಟಕದ ಸದಸ್ಯ ಎಸ್ ಆಯ್ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಕಾರ್ಯದರ್ಶಿ ಡಾ ರಮೇಶ ತೇಲಿ ನಿರೂಪಿಸಿದರು. ಜಿಲ್ಲಾ ಸಂಚಾಲಕ ಪ್ರೊ ಜಿ ಎಂ ಹಳ್ಳೂರ ಸ್ವಾಗತಿಸಿದರು. ಜಿಲ್ಲಾ ಸದಸ್ಯ ಮೌಲಾಲಾಬ ಜಹಾಗಿರದಾರ ವಂದಿಸಿದರು.

ಕಾರ್ಯಕ್ರಮದಲ್ಲಿ ನಾಗತಾಣ ಭಜನೆ ಉಪ್ಪಲದಿನ್ನಿ ರಿವಾಯತ ಮತ್ತು ವಚನ ಪಠಣ ನಡೆದವು.

# ವಿಶ್ವಗುರು ಬಸವೇಶ್ವರರ ಜಯಂತಿ :ಬಸವ ನೆಲದಲ್ಲಿ ತೊಟ್ಟಿಲೋತ್ಸವ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ಪಟ್ಟಣದ ಸೇರಿದಂತೆ ತಾಲೂಕಿನಾದ್ಯಂತ ಸಾಂಸ್ಕೃತಿಕ ನಾಯಕ ಬಸವೇಶ್ವರರ ಜಯಂತಿಯನ್ನು ಶುಕ್ರವಾರ ಜನತೆ ಶ್ರದ್ಧಾ–ಭಕ್ತಿಯಿಂದ ಆಚ–ರಿಸಿದರು.ಪಟ್ಟಣದ ಐತಿಹಾಸಿಕ ಮೂಲನಂದೀಶ್ವರ(ಬಸವೇಶ್ವರ) ದೇವಸ್ಥಾನದಲ್ಲಿ ಭಕ್ತರು ಬೆಳಗ್ಗೆ ರುದ್ರಾಭಿಷೇಕ, ವಿಶೇಷ ಪೂಜೆಯಲ್ಲಿ ಭಾಗವಹಿಸಿದ್ದರು. ಬಸವ ಜಯಂತಿಯಂಗವಾಗಿ ಮೂಲನಂದೀಶ್ವರ(ಬಸವೇಶ್ವರ) ಪಲ್ಲಕ್ಕಿ ಕಟ್ಟೆಯನ್ನು ಅಲಂಕ–ರಿಸಲಾಗಿತ್ತು.

ಸಂಪ್ರದಾಯದಂತೆ ಬಸವೇಶ್ವರ ದೇವಸ್ಥಾನದಿಂದ ವಿರಕ್ತಮಠಕ್ಕೆ ತೆರಳಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿಯವರನ್ನು ಮೆರವಣಿಗೆ ಮೂಲಕ ದೇವಸ್ಥಾನಕ್ಕ ಬರಮಾಡಿಕೊಳ್ಳಲಾಯಿತು. ದೇವಸ್ಥಾನಕ್ಕೆ ಆಗಮಿಸಿದ ಶ್ರೀಗಳು ಬಸವ ಜಯಂತಿಯಂಗವಾಗಿ ಹಮ್ಮಿಕೊಂಡಿದ್ದ ಶಿವಭಜನೆಗೆ ಪೂಜೆ ಸಲ್ಲಿಸಿ ಮಂಗಳಾರತಿ ಜರುಗಿದ ನಂತರ ಶಿವಭಜನೆ ಮುಕ್ತಾಯಗೊಳಿಸಿದರು. ನಂತರ ದೇವಸ್ಥಾನದ ಆವರಣದಲ್ಲಿ ಶ್ರೀಗಳಿಂದ ಷಟ್ಪಲ ಧ್ವಜಾರೋಹಣ ನೆರವೇರಿಸುವ ಮೂಲಕ ಬಸವ ಜಯಂತಿಗೆ ಚಾಲನೆ ನೀಡಿದರು. ನಂತರ ಶ್ರೀಗಳನ್ನು ಶ್ರೀಮಠಕ್ಕೆ ಮೆರವಣಿಗೆ ಮೂಲಕ ಬೀಳ್ಕೊಡಲಾಯಿತು.

ಬೆಳಗ್ಗೆ 11.30 ಗಂಟೆಗೆ ಸುಮಾ–ರಿಗೆ ಬಸವಜನ್ಮ ಸ್ಮಾರಕದಿಂದ ವಿರಕ್ತಮಠಕ್ಕೆ ತೆರಳಿ ಶ್ರೀಗಳನ್ನು ಬಸವ ಜನ್ಮಸ್ಮಾರಕಕ್ಕೆ ಮೆರವಣಿಗೆ ಮೂಲಕ ಬರಮಾಡಿಕೊಳ್ಳಲಾಯಿತು. ಶ್ರೀಗಳ ಆಗಮನದ ನಂತರ ಅವರ ಸಾನಿಧ್ಯದಲ್ಲಿ ಬೆಳ್ಳಿ ಬಾಲ ಬಸವ ಮೂರ್ತಿಯನ್ನು ತೊಟ್ಟಿಲಲ್ಲಿ ಹಾಕುವ ಮೂಲಕ ಮಹಿಳೆಯರು ನಾಮಕರಣ ಮಾಡುವ ಪದ್ಧತಿ ನೆರವೇರಿಸಿ ಜೋಗುಳ ಪದ ಹಾಡಿದರು.

ಸಂಪ್ರದಾಯದಂತೆ ಸಂತಾನ ಬಯಸಿ ಶ್ರವಣಾ ಮೋಟಗಿ, ಪೂಜಾ ವಂದಾಲ,ಲಕ್ಷ್ಮೀ ಬೈರಗೊಂಡ, ಪುಟ್ಟಕ್ಕ ಚವ್ಹಾಣ, ಸುವರ್ಣಾ ಸಜ್ಜನ, ಭಾಗ್ಯಶ್ರೀ ಪೂಜಾರಿ, ಶೈಲಾ ಕೋಲಕಾರ, ಕವಿತಾ ನಾಗೂರ, ಶೃತಿ ತೆಗ್ಗಿನಮಠ, ಅಶ್ವಿನಿ ಕಿಣಗಿ, ಅಕ್ಷತಾ ಕಿಣಗಿ, ಅಶ್ವಿನಿ ಕೊಟ್ಟೂರ, ರಾಜೇಶ್ವರ ಸಂಪನ್ನವರ, ಭಾಗ್ಯಶ್ರೀ ಕಲಾಲ, ಸಹನಾ ಕೊಡೆಕಲ್ ಸೇರಿದಂತೆ 40 ಕ್ಕೂ ಹೆಚ್ಚು ಸುಮಂಗಲೆಯರು ಬಸವೇಶ್ವರ ನಾಮಕರಣ ಮಾಡುವ ಸಂದರ್ಭದಲ್ಲಿ ತೊಟ್ಟಿಲು ಕೆಳಗೆ ಕುಳಿತುಕೊಂಡಿದ್ದರು. ತೊಟ್ಟಿಲು ಕೆಳಗೆ ಕುಳಿತ ಸುಮಂಗಲೆಯರ ಉಡಿಯಲ್ಲಿ ಶ್ರೀಗಳು ಬೆಳ್ಳಿ ಬಾಲ ಬಸವನನ್ನು ಹಾಕಿ ಶುಭಾಶೀರ್ವಾದ ಮಾಡಿದರು. ಅಪಾರ ಸಂಖ್ಯೆಯಲ್ಲಿ ಭಾಗವಹಿಸಿದ್ದ ಮಹಿಳೆಯರು ಬಸವ ನಾಮಕರಣ ನೆರವೇರುವ ಸಂದರ್ಭದಲ್ಲಿ ಬಸವ ಜಯಘೋಷ ಹಾಕಿದರು. ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ಹಿರಿಯರಾದ ಬಸವರಾಜ ಹಾರಿವಾಳ ಅವರು ನೆರವೇರಿಸಿಕೊಟ್ಟರು.

ತೊಟ್ಟಿಲೋತ್ಸವ ಕಾರ್ಯಕ್ರಮದಲ್ಲಿ ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ಜಿ.ಎಸ್.ಚಿನಿವಾಲರ, ಬಿ.ಎಸ್.ಕಳ್ಳಿ, ಸಾಹಿತಿ ಜಿ.ಎಸ್.ಸಿದ್ದರಾಮಯ್ಯ, ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಬಸವರಾಜ ಗೊಳಸಂಗಿ, ಸುರೇಶಗೌಡ ಪಾಟೀಲ, ಎಂ.ಜಿ.ಆದಿಗೊಂಡ, ಸಂಗಣ್ಣ ಕಲ್ಲೂರ, ಸಂಗಮೇಶ ಓಲೇಕಾರ, ಸಂಕನಗೌಡ ಪಾಟೀಲ, ಜಗದೀಶ ಕೊಟ್ರಶೆಟ್ಟಿ, ಉಮೇಶ ಹಾರಿವಾಳ, ಈರನಗೌಡ ಪಾಟೀಲ, ಅಶೋಕ ಹಾರಿವಾಳ, ವಿಜಯ ಮದ್ರಾಸ, ಸುರೇಶ ಬಾಗೇವಾಡಿ, ಆರ್.ಜಿ.ಅಳ್ಳಗಿ, ವೀರಣ್ಣ ಮರ್ತುರ, ವಿವೇಕಾನಂದ ಕಲ್ಯಾಣಶೆಟ್ಟಿ, ಮಹಾಂತೇಶ ಹಂಜಗಿ, ವಿನುತ ಕಲ್ಲೂರ, ಕಾಶೀನಾಥ ರಾಠೋಡ, ಶಿವಲಿಂಗಪ್ಪ ಕಿಣಗಿ, ಎಸ್.ಐ.ಡೋಣೂರ, ಶಿವು ಮಡಿಕೇಶ್ವರ, ರವಿ ಕಿಣಗಿ, ಬಸವರಾಜ ಕಿಣಗಿ, ಸಂಜನಾ ಕಿಣಗಿ, ಸಾವಿತ್ರಿ ಕಲ್ಯಾಣಶೆಟ್ಟಿ, ಶ್ವೇತಾ ಕಿಣಗಿ ಸೇ–ರಿದಂತೆ ವಿವಿಧೆಡೆಗಳಿಂದ ಆಗಮಿಸಿದ್ದ ಅಪಾರ ಸಂಖ್ಯೆಯಲ್ಲಿ ಜನರು ಭಾಗವಹಿಸಿದ್ದರು. ನಂತರ ಪ್ರಸಾದ ರೂಪದಲ್ಲಿ ಗುಗ್ಗರಿ, ಕಲ್ಲುಸಕ್ಕರೆ ವಿತ–ರಿಸಲಾಯಿತು. ಕೂಡಲಸಂಗಮ ಅಭಿವೃದ್ಧಿ ಮಂಡಳಿಯಿಂದ ಬಸವಜನ್ಮ ಸ್ಮಾರಕ ಮುಂಭಾಗ, ದೇವಸ್ಥಾನದ ದಾಸೋಹದಲ್ಲಿ ಹುಗ್ಗಿ, ಅನ್ನ–ಸಾಂಬಾರ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ತೊಟ್ಟಿಲೋತ್ಸವ ಕಾರ್ಯಕ್ರಮ ನಡೆಯುವ ಮುನ್ನವೇ ಕ್ಷೇತ್ರದ ಶಾಸಕ, ಸಚಿವ ಶಿವಾನಂದ ಪಾಟೀಲ ಅವರು ಬಸವ ಜನ್ಮ ಸ್ಮಾರಕಕ್ಕೆ ಭೇಟಿನೀಡಿ ದರ್ಶನ ಪಡೆದುಕೊಂಡರು.

# ಜಗಜ್ಯೋತಿ ಬಸವೇಶ್ವರ–ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ

ಉದಯರಶ್ಮಿ ನ್ಯೂಸ್



ವಿಜಯಪುರ: ಜಿಲ್ಲಾಡಳಿತದ ವತಿಯಿಂದ ಶುಕ್ರವಾರದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಗಜ್ಯೋತಿ ಬಸವೇಶ್ವರ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಿಸಲಾಯಿತು.

ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆ ಜಾ–ರಿಯಲ್ಲಿರುವುದರಿಂದ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡ ಜಯಂತಿ ಕಾರ್ಯಕ್ರಮವನ್ನು ಅತ್ಯಂತ ಸರಳವಾಗಿ ಶಿಷ್ಟಾಚಾರದಂತೆ ಆಚರಿಸಲಾಯಿತು. ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ತಹಶೀಲ್ದಾರರಾದ ಶ್ರೀಮತಿ ಕವಿತಾ ಅವರು ಬಸವಣ್ಣನವರ ಹಾಗೂ ಶಿವಶರಣೆ ಹೆಮರೆಡ್ಡಿ ಮಲ್ಲಮ್ಮ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ ಗೌರವ ಸಲ್ಲಿಸಿದರು.

ಇದಕ್ಕೂ ಮೊದಲು ನಗರದ ಬಸವೇಶ್ವರ ವೃತ್ತದಲ್ಲಿರುವ ಬಸವೇಶ್ವರ ಪುತ್ಥಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೊನಾವಣೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಸಮಾಜದ ಮುಖಂಡರುಗಳಾದ ಶರಣು ಸಬರದ, ಭೀಮರಾಯ ಜಿಗಜಿನ್ನಿ, ಹಣಮಂತ ಮಾಚಪ್ಪನವರ, ಸುರೇಶ ದೇಸಾಯಿ, ಕೆ.ಕೆ.ಬನ್ನೆಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೂಲನಂದೀಶ್ವರ–ಬಸವೇಶ್ವರ ದರ್ಶನ ಪಡೆದ ಸಚಿವ ಶಿವಾನಂದ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ಸಾಂಸ್ಕೃತಿಕ ನಾಯಕ ಬಸವೇಶ್ವರರ ಜಯಂತಿ ಹಿನ್ನೆಲೆಯಲ್ಲಿ ಕ್ಷೇತ್ರದ ಶಾಸಕ, ಸಚಿವ ಶಿವಾನಂದ ಪಾಟೀಲ ಅವರು ಶುಕ್ರವಾರ ಪಟ್ಟಣದ ಐತಿಹಾಸಿಕ ಮೂಲನಂದೀಶ್ವರ (ಬಸವೇಶ್ವರ) ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದುಕೊಂಡರು. ನಂತರ ಹೃದಯ ಭಾಗದಲ್ಲಿರುವ ಬಸವೇಶ್ವರ ವೃತ್ತದಲ್ಲಿರುವ ಅಶ್ವಾರೂಢ ಬಸವೇಶ್ವರರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಬಸವೇಶ್ವರ–ರಿಗೆ ನಮನ ಸಲ್ಲಿಸಿದರು. ನಂತರ ಬಸವ ಜನ್ಮ ಸ್ಮಾರಕಕ್ಕೆ ಭೇಟಿ ನೀಡಿ ಬಸವ ತೊಟ್ಟಿಲು ತೂಗಿ ನಮಸ್ಕ–ರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಸುರೇಶ ಹಾರಿವಾಳ, ಭರತು ಅಗರವಾಲ, ಬಸವರಾಜ ಹಾ–ರಿವಾಳ, ಸುರೇಶಗೌಡ ಪಾಟೀಲ. ಸಂಕನಗೌಡ ಪಾಟೀಲ, ಸಂಗಮೇಶ ಓಲೇಕಾರ, ಬಸವರಾಜ ಗೊಳಸಂಗಿ, ಕಾಶೀನಾಥ ರಾಠೋಡ ಸೇರಿದಂತೆ ಇತರರು ಇದ್ದರು.

# ಶರಣ ಸಾಹಿತ್ಯ ಪರಿಷತ್ತಿನಿಂದ ಬಸವ ಜಯಂತಿ ಆಚರಣೆ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಇಡೀ ಜಗತ್ತಿನಲ್ಲಿಯೇ ಮಹಿಳೆಯರ ಸ್ವಾತಂತ್ರ್ಯಕ್ಕಾಗಿ ತಮ್ಮ ಬದುಕನ್ನೇ ಮುಡುಪಾಗಿಟ್ಟ ಜಗತ್ತಿನ ಮೊದಲನೇ ವ್ಯಕ್ತಿ ಬಸವಣ್ಣನವರು ಎಂದು ಡಾ ಯುವರಾಜ ಮಾದನಶೆಟ್ಟಿ ಹೇಳಿದರು.

ಪಟ್ಟಣದ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಶುಕ್ರವಾರ ತಾಲೂಕು ಶರಣ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ಧ್ವನಿ ಇಲ್ಲದವರಿಗೆ ಧ್ವನಿ ನೀಡಿದವರು ಬಿದ್ದವರನ್ನು ಮೇಲೆತ್ತಿದ ಮಹಾನುಭಾವ ಬಸವಣ್ಣನವರು. ಸರ್ವಕಾಲಕ್ಕೂ ನಮ್ಮ ಮುಂದೆ ಆದರ್ಶರಾಗಿ ನಿಲ್ಲುತ್ತಾರೆ. ಅವರ ತತ್ವಗಳನ್ನು ನಾವು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಪ್ರಚಾರ ಮಾಡುವ ಅವಶ್ಯಕತೆ ಇಂದು ಹೆಚ್ಚಾಗಿದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಸಾಹಿತಿ ಮಂಜುನಾಥ ಗುಳೇದಗುಡ್ಡ ಮಾತನಾಡಿ. ಬಸವಣ್ಣವರ ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ನಮ್ಮ



ಬದುಕನ್ನು ಉತ್ತಮ ರೀತಿಯಲ್ಲಿ ಸಾಗಿಸಬಹುದು.ನುಡಿದಂತೆ ನಡೆದ ಶರಣರ ವಿಚಾರಗಳು ಸರ್ವಕಾಲಕ್ಕೂ ನಮಗೆ ದಾರಿದೀಪವಾಗಿ ನಿಲ್ಲುತ್ತವೆ ಎಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತುರ ಹಾಗೂ ನಿವೃತ್ತ ಬ್ಯಾಂಕ್ ಅಧಿಕಾರಿ ವೀರೇಶ ಕುಂಟೋಜಿ ಮಾತನಾಡಿ, 900 ವರ್ಷಗಳು ಗತಿಸಿದರೂ ಕೂಡ ಶರಣರ ವಿಚಾರಗಳು ಇಂದಿಗೂ ಪ್ರಸ್ತುತವಾಗಿ ನಮಗೆ ಮಾರ್ಗದರ್ಶನ ನೀಡುತ್ತವೆ.ಕಾಯಕವೇ ಕೈಲಾಸ ಎಂದು ಹೇಳುವ ಮೂಲಕ ಕಾಯಕಕ್ಕೆ ಹೊಸ ಅರ್ಥವನ್ನು ನೀಡಿದವರು ಶರಣರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕದಳಿ ವೇದಿಕೆ ಅಧ್ಯಕ್ಷ ಸಾವಿತ್ರಿ ಕಲ್ಯಾಣಶೆಟ್ಟಿ, ವೀಣಾ ಗುಳೇದಗುಡ್ಡ, ಅಕ್ಕಮಹಾದೇವಿ ಅಂಗಡಿ, ಕವಿತಾ ಮರ್ತೂರ, ದ್ರಾಕ್ಷಾಯಿಣಿ ತೊಂತನಾಳ ಇದ್ದರು. ಎ□□□ ಮನಗೂಳಿ ನಿರೂಪಿಸಿದರು. ವಿವೇಕಾನಂದ ಕಲ್ಯಾಣಶೆಟ್ಟಿ ವಂದಿಸಿದರು

# ಬಸವತತ್ವ ಪ್ರಚಾರದ ಬಸವಜ್ಯೋತಿ ಯಾತ್ರೆಗೆ ಚಾಲನೆ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಬಸವಜ್ಯೋತಿಯನ್ನು ಕಳೆದ ಹನ್ನೆರಡು ವರ್ಷಗಳಿಂದ ಕೊಂಡೊಯ್ಯುತ್ತಿರುವ 63 ಹರೆಯದ ಬಸನಗೌಡರು ಇಂತಹ ವಯಸ್ಸಿನಲ್ಲಿ ಆರೋಗ್ಯದ ಬಗ್ಗೆ ಗಮನವಿಟ್ಟುಕೊಂಡು ಒಂದು ಆದ್ಯಾತ್ಮಿಕ ಮ್ಯಾರಥಾನ್ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಸಿದ್ದಲಿಂಗ ಸ್ವಾಮೀಜಿ ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಗುರುವಾರ ರಾತ್ರಿ ಬಸವನಬಾಗೇವಾಡಿಯಿಂದ ವಿಜಯಪುರ ನಗರಕ್ಕೆ ಕಳೆದ ಹನ್ನೆರಡು ವರ್ಷಗಳಿಂದ ಬಸವಜ್ಯೋತಿಯನ್ನು ಓಡುತ್ತಲೇ ಕೊಂಡೊಯುತ್ತಿರುವ ಬೆಂಗಳೂರಿನ ಉದ್ಯಮಿ ಬಸನಗೌಡ ಪಾಟೀಲ ಅವರ ಜ್ಯೋತಿಯಾತ್ರೆಗೆ ಚಾಲನೆ ಕೊಟ್ಟು ಮಾತನಾಡಿದರು.

ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಮಾತನಾಡಿ, ಬಸವತತ್ವ ಪ್ರಚಾರಕ್ಕಾಗಿ ಬಸವಜ್ಯೋತಿಯಾತ್ರೆಯನ್ನು ಮಾಡುತ್ತಿರುವ ಬಸನಗೌಡ ಪಾಟೀಲ ಅವರ ಕಾರ್ಯ ಇಂದಿನ ಯುವಕರಿಗೆ ಮಾದರಿ. ಇಂದಿನ ಪ್ರಸ್ತುತ ಯುಗದಲ್ಲಿ ಬಸವ ತತ್ವ ಬಸವಣ್ಣನವರ ವಚನ ಸಾಹಿತ್ಯದ ಕುರಿತು ಜನರಿಗೆ ಜಾಗೃತಿ ಮೂಡಿಸುವುದು ಅತಿ ಅವಶ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಜು ಬಿರಾದಾರ, ಮುತ್ತು ಡಂಬಳ, ಮುತ್ತು ಚಿಕ್ಕೊಂಡ, ಎಸ್.ಎ.ಪಾಟೀಲ, ಉಮೇಶ ಅವಟಿ, ಮಹಾಂತೇಶ ಜಾಲಗೇರಿ, ವಿಜಯಪುರ ಸೈಕ್ಲಿಂಗ್ ಗ್ರೂಪಿನ ಸಂಕೇತ ಬಗಲಿ, ಸೋಮಶೇಖರ್ ರಾಜು ಸಾಲೋಟಗಿ, ಡಾ.ಭೀಮನಗೌಡ ಬಿರಾದಾರ ಸೇರಿದಂತೆ ಇತರರು ಇದ್ದರು.



# ಬಸವಣ್ಣನವರ ಜೀವನ ನಮಗೆಲ್ಲ ದಾರಿದೀಪ :ಪ್ರೊ.ಸಾತಿಹಾಳ

ಉದಯರಶ್ಮಿ ನ್ಯೂಸ್



ಕಲಕೇರಿ: ಸಮೀಪದ ತಿಳಗೂಳ ಗ್ರಾಮದಲ್ಲಿ ವಿಶ್ವಗುರು ಸಾಂಸ್ಕೃತಿಯ ನಾಯಕ ಬಸವಣ್ಣನವರ ಜಯಂತಿಯನ್ನು ಆಚರಿಸಲಾಯಿತು.

ಗ್ರಾಮದ ಹಿರಿಯರು ಮತ್ತು ಯುವಕರು ಬಸವಣ್ಣನವರ ವೃತ್ತದಲ್ಲಿ ಸೇರಿ ಭಕ್ತಿಪೂರ್ವಕವಾಗಿ ಬಸವಣ್ಣನವರ ಭಾವಚಿತ್ರಕ್ಕೆ ಮಹಾಪೂಜೆ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಪ್ರೊ. ಜಗದೀಶ ಸಾತಿಹಾಳ ಅವರು, 12ನೇ ಶತಮಾನದಲ್ಲಿ ವಚನ ಕ್ರಾಂತಿಯನ್ನು ಮಾಡಿ ನುಡಿದಂತೆ ನಡೆದ ಮಹಾನ್ ಚೇತನ ಅಣ್ಣ ಬಸವಣ್ಣನವರಾಗಿದ್ದು, ಕಾಯಕ ತತ್ವದ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರೇರಣೆಯಾದ ಸಮಾಜದಲ್ಲಿ ಸಮಾನತೆಯನ್ನು ಸಾರಿದ ಅಣ್ಣ ಬಸವಣ್ಣನವರ ಜೀವನ ನಮಗೆಲ್ಲ ದಾರಿದೀಪವಾಗಿದ್ದು, ಅವರ ವಚನಗಳಲ್ಲಿಯ ಒಂದಿಷ್ಟು ವಿಚಾರಗಳನ್ನು ನಮ್ಮ ಜೀವನದಲ್ಲಿ ಪ್ರತಿನಿತ್ಯ ಅಳವಡಿಸಿಕೊಂಡು ನಡೆದಾಗ ಮಾತ್ರ ನಮ್ಮ ಜೀವನ ಸಾರ್ಥಕವಾಗುವುದಲ್ಲದೇ ಅದು ನಾವು ಅವರಿಗೆ ಸಲ್ಲಿಸುವ ನಿಜವಾದ ಭಕ್ತಿ ಮತ್ತು ಗೌರವವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿವಪುತ್ರ ಸಾತಿಹಾಳ, ಷಡಕ್ಷರಿ ಹಿರೇಮಠ, ಸತೀಶ ನೆಲ್ಲಗಿ, ಶರಣಪ್ಪ ಗದ್ದಗಿ, ಭೀಮು ಕುಂಬಾರ, ಸೋಮನಗೌಡ ಬಾಗೇವಾಡಿ, ಶಿವನಗೌಡ ಬಿರಾದಾರ, ಸಂಗಪ್ಪ ಪೊಲೀಸಪಾಟೀಲ, ಸಂಗಪ್ಪ ಸಾತಿಹಾಳ, ಮುತ್ತು ಸಾತಿಹಾಳ ಎಮ್‌ಆರ್‌ಡಬ್ಲೂ ಸಿಂದಗಿ, ಮಹಾಂತೇಶ ಸಜ್ಜನ, ಸತೀಶ ಬಡಿಗೇರ, ನಿಂಗನಗೌಡ ಸುಬೇದಾರ ಸೇರಿದಂತೆ ಇತರರು ಇದ್ದರು.

# ಬಿಡುಗಡೆಯ ಭ್ರಮೆ

ಶಾಂತಿ ಮಧ್ಯಮ ವರ್ಗದ ಗೃಹಿಣಿ. ತವರುಮನೆಯಲ್ಲೂ ಆರಕ್ಕೇರದ, ಮೂರಕ್ಕಿಳಿಯದ



## ಭಾವರಶ್ಮಿ

– ರಮಾಶ್ರೀ ನಾಡಿಗೇರ್
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಜೀವನ ಕಂಡಿದ್ದವಳಿಗೆ, ಗಂಡನ ಮನೆಯಲ್ಲಿ ದೊರಕಿದ್ದೂ ಅದೇ ರೀತಿಯ ಜೀವನ. ಬದುಕು ಸಣ್ಣ ಮಟ್ಟದ್ದಾದರೂ, ಕನಸುಗಳು ಮಾತ್ರ ಮುಗಿಲೆತ್ತರಕ್ಕೆ. ತಕ್ಕ ಮಟ್ಟಿನ ಸುಂದರಿಯಾಗಿದ್ದ ಶಾಂತಿಗೆ ಮದುವೆಯಾಗುವ ಮುಂಚೆ ಇದ್ದ ಕನಸುಗಳೆಷ್ಟೋ. ಅದಕ್ಕೆ ತಕ್ಕಂತೆ ಗೆಳತಿಯರು ಕೂಡ ನಿನ್ನ ಸೌಂದರ್ಯಕ್ಕೆ ಯಾರಾದರೂ ಮರುಳಾಗ್ತಾರೆ ಬಿಡೇ. ಒಳ್ಳೇ ರಾಜಕುಮಾರನೇ ನಿನ್ನ ಕೈಹಿಡಿಯುವುದು ಎಂದು ಹೇಳಿ, ಹೇಳಿ.. ಅವಳ ಕನಸಿಗೆ ರೆಕ್ಕೆ ಕಟ್ಟಿದ್ದರು.



ನಿಜ ಜೀವನದಲ್ಲಿ ಮದುವೆ ಎಂಬ ಮಾರ್ಕೆಟ್ಟನಲ್ಲಿ ಸೌಂದರ್ಯಕ್ಕೆ ಬೆಲೆ ಇರುವುದು ಕಾಂಚಾಣದ ಜೊತೆಗಿದ್ದಾಗ ಮಾತ್ರ ಎಂದು ತಿಳಿದಾಗ ಅವಳ ಕನಸುಗಳೆಲ್ಲ ಕರಗಿದ್ದವು. ತಮ್ಮಂತೆ ಮಧ್ಯಮ ವರ್ಗದ ಮನೆಗೆ ಹಿರಿಸೊಸೆಯಾಗಿ ಹೋದಾಗ ಶಾಂತಿ ಬಹಳವಾಗಿ ನೊಂದಳು. ಅಪ್ಪ – ಅಮ್ಮನ ಆರೋಗ್ಯ, ತಂಗಿಯ ಮದುವೆ ಜವಾಬ್ದಾರಿ, ತಮ್ಮನ ಓದಿಗೆ ಹೆಗಲಾಗಿ ದುಡಿಯಬೇಕಾಗಿದ್ದ ಗಂಡ ದೊರಕ್ಕಿದ್ದರಿಂದ ಅವಳ ಆಶಾಜೀವನ ಭಂಗವಾಯಿತು. ಅತ್ತೆ ಮಾವನ ಜೊತೆ ಹಳ್ಳಿಯಲ್ಲಿರದೇ,



ದುಡಿಮೆಗಾಗಿ ನಗರವಾಸಿ ಆಗಿದೊಂದೇ, ಅವಳ ಈಡೇ–ರಿದ ಬಯಕೆ.

ಗಂಡ ಎಷ್ಟೇ ದುಡಿದರೂ, ಶಾಂತಿಯ ಕನಸಿನ ಜೀವನ ಕೈಗೇಟುಕಲೇ ಇಲ್ಲ. ಆ ಸಮಯದಲ್ಲೇ ಆಗಿತ್ತು, ಅವನ ಪ್ರವೇಶ ಗಂಡನ ಗೆಳೆಯನ ರೂಪದಲ್ಲಿ. ಬಣ್ಣ ಬಣ್ಣದ ಮಾತುಗಳಿಂದ, ಪುಡಿಗಾಸಿನ ಕಾಣಿಕೆಗಳಿಂದ ಕಿಟಕಿಯ ಆಚ–ಗಿನ ರಂಗು ರಂಗಿನ ದೃಶ್ಯಗಳನ್ನು ಅಂಗೈನಲ್ಲಿಯೇ ತೋರಿಸಿದ. ಮದುವೆ ಎಂಬ ಬಂಧನ ಕಿತ್ತೊಗೆದು ಹೊರಗೆ ಹೋದಾಗಲೇ ತಿಳಿದಿದ್ದು ಅವನ ನಿಜ ರೂಪ. ಅವಳನ್ನು ಸುಖದ ಭ್ರಮೆಯ ಬಲೆಯಲ್ಲಿ ಕೆಡವಿ ಮನೆಯ ಹೊಸಿಲಿನಿಂದಾಚೆ ಕರೆತಂದವನು, ಅವಳ ಸೌಂದರ್ಯವನ್ನೇ ಬಂಡವಾಳ ಮಾಡಿಕೊಂಡು ತನ್ನ ಆಸೆಗಳ ಪೂರೈಸಿಕೊಂಡನು.

ಕಿಟಕಿಯಿಂದ ಹೊರಗೆ ಕಾಣುವ ದೃಶ್ಯಗಳೆಲ್ಲ ಸುಂದರ, ನೈಜ ಎಂಬ ಭ್ರಮೆಯಿಂದ ಹೊರಬಂದಿದ್ದಳು ಶಾಂತಿ. ಹೊಸಿಲ ಒಳಗೆ ಇರುವಾಗ ಇದ್ದ ಮರ್ಯಾದೆ ಹೊಸಿಲು ದಾಟಿ ಬಂದಾಗ ಹರಾಜಾಗಿ ಹೋಗಿತ್ತು.

# ಬಸವಣ್ಣನವರ ತತ್ವ ಸಿದ್ಧಾಂತ ವಿಶ್ವ ಒಪ್ಪಿಕೊಳ್ಳುವ ಕಾಲ ಸನ್ನಿಹಿತ

ಉದಯರಶ್ಮಿ ನ್ಯೂಸ್



ಇಂಡಿ: ಜಾತಿ ರಹಿತ ಸಮಾಜ ನಿರ್ಮಾಣ ಮಾಡಲು ಬಸವಣ್ಣ ಕೊಟ್ಟ ಕೊಡುಗೆ ಅಪಾರವಾದದ್ದು. ಅವರ ತತ್ವ ಸಿದ್ಧಾಂತಗಳು ಇಡೀ ವಿಶ್ವ ಒಪ್ಪಿಕೊಳ್ಳುವ ಕಾಲ ಇಂದು ಸನ್ನಿಹಿತವಾಗಿದೆ ಎಂದು ಬಸವ ಸಮಿತಿ ಅಧ್ಯಕ್ಷ ಶಿವರಾಯಗೌಡ ಬಿರಾದಾರ ಹೇಳಿದರು.

ಶುಕ್ರವಾರ ತಾಲೂಕಿನ ಆಳೂರ ಗ್ರಾಮದ ಕಾರ್ಕಲ್ ವಸತಿ ಹತ್ತಿರ ಬಸವೇಶ್ವರ ಸರ್ಕಲದಲ್ಲಿ ನಡೆದ ಬಸವ ಜಯಂತಿ ಕಾರ್‍ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.


ಭಕ್ತಿ ಭಂಡಾರಿ ಬಸವಣ್ಣನವರ ವಚನಗಳು ಹಾಗೂ ತತ್ವ ಸಿದ್ಧಾಂತಗಳು ಸರ್ವಕಾಲಕ್ಕೂ ಸತ್ಯವಾಗಿವೆ, ಅದನ್ನು ಬಹುತೇಕ ಎಲ್ಲಾ ಪಾಶ್ಚಿಮಾತ್ಯ ದೇಶಗಳಲ್ಲಿ ಅನುಸರಿಸಲಾಗುತ್ತಿದೆ ಎಂದ ಅವರು, ಬಸವಣ್ಣನವರ ಆದ–ರ್ಶಗಳನ್ನು ನಾವುಗಳೆಲ್ಲಾ ರೂಢಿಸಿಕೊಳ್ಳಬೇಕೆಂದರು.

ಸಮಿತಿಯ ಉಪಾಧ್ಯಕ್ಷ ಜಗದೇವಪ್ಪ ಬಬಲಾದ ಮಾತನಾಡಿ, ಮಹಿಳೆಯರಿಗೆ ಸ್ವಾತಂ□ ನೀಡಿದ ಮೊಟ್ಟಮೊದಲ ದಾರ್ಶನಿಕ ಬಸವಣ್ಣನವರು ಎಂದ ಅವರು, ಹಿಂದಿನ ಕಾಲದಲ್ಲಿ ಹೆಣ್ಣಿನ ಎಲ್ಲಾ ಸ್ವಾತಂತ್ರವನ್ನು ಕಸಿದುಕೊಂಡು ಆಕೆಯನ್ನು ಅಡುಗೆ ಮನೆಗೆ ಸೀಮಿತಗೊಳಿಸಲಾಗಿತ್ತು. ಆದ–ರೆ, 12ನೇ ಶತಮಾನದಲ್ಲಿ ಬಸವಣ್ಣನವರು ಹೆಣ್ಣು ಮಕ್ಕಳಿಗೆ ಸಮಾನತೆ ಮತ್ತು ಸ್ವಾತಂ□ವನ್ನು ನೀಡುವ ಮೂಲಕ ಸಮಾಜದಲ್ಲಿ ಕ್ರಾಂತಿ ಮಾಡಿದರು ಎಂದರು.

ನಿರಂಜನ ಬಡಿಗೇರ ಮಾತನಾಡಿ, ಬಸವಣ್ಣನವರು 12ನೇ ಶತಮಾನದಲ್ಲಿಯೇ ಜಾತಿ, ಲಿಂಗಭೇದ, ಮೇಲು ಕೀಳು ಎಂಬ ಭೇದವನ್ನು ತಡೆಯಲು ಹೋರಾಡಿದರು. ಬಸವಣ್ಣನವರ ಆದರ್ಶಗಳನ್ನು ನಾವುಗಳು ಅಳವಡಿಸಿಕೊಳ್ಳಬೇಕೆಂದರು.

ಸಲೀಂ ಚಪರಬಂದ, ಬಸವರಾಜ ಕಾರ್ಕಲ್, ಧರ್ಮಣ ನಾಟೀಕಾರ, ಬಸು ಖೇಡ, ಅಂಬಣ್ಣ ತೆಲಿ, ಪರಮೇಶ್ವರ ನಾಟೀಕಾರ, ಕಲ್ಯಾಣಿ ಕುಮಸಗಿ, ಸಂಗು ಬಗಲಿ, ರೇವಣಸಿದ್ದ ಬೇವನೂರ ಸೇರಿದಂತೆ ಅನೇಕ ಸಮಿತಿಯ ಸದಸ್ಯರುಗಳು ಇದ್ದರು.

# ಬಂಜಾರಾ ಶಾಲೆ ಕನ್ನಡ ಮಾಧ್ಯಮ ಮಕ್ಕಳ ಉತ್ತಮ ಸಾಧನೆ



ಉದಯರಶ್ಮಿ ನ್ಯೂಸ್

ವಿಜಯಪುರ: ಪಟ್ಟಣದ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಬಂಜಾರಾ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ಮಕ್ಕಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 78.83 ರಷ್ಟು ಫಲಿತಾಂಶ ಸಾಧಿಸಿದ್ದಾರೆ.

ತೃಪ್ತಿ ತೋದಲಬಾಗಿ (ಶೇ. 90.24%) ಪ್ರಥಮ, ಆರತಿ ಚವ್ಹಾಣ್ (ಶೇ. 89.28%) ದ್ವಿತೀಯ, ಅಶ್ವಿನಿ ಚವ್ಹಾಣ್ (ಶೇ. 87.20%) ತೃತೀಯ ಸ್ಥಾನ ಪಡೆದಿದ್ದಾರೆ. ಉಳಿದಂತೆ ರೇಣುಕಾ ಕೋಲಕಾರ ಶೇ. 86.88%, ಅಜೀತ ಚವ್ಹಾಣ್ ಶೇ. 85.28% ಅಂಕ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಮುಖ್ಯ ಗುರು ಇ.ಡಿ.ಲಮಾಣಿ, ಸಂಸ್ಥೆಯ ಅಧ್ಯಕ್ಷ ಡಿ.ಎಲ್.ಚವ್ಹಾಣ್, ಕಾರ್ಯಾಧ್ಯಕ್ಷ ಕೆ.ಜಿ.ರಾಠೋಡ, ಕಾರ್ಯದರ್ಶಿ ರಾಜಶೇಖರ ಚವ್ಹಾಣ್, ಶಾಲಾ ಆಡಳಿತ ಮಂಡಳಿ, ಶಿಕ್ಷಕ ಸಿಬ್ಬಂದಿ ವರ್ಗ ಹರ್ಷ ವ್ಯಕ್ತಪಡಿಸಿದ್ದಾರೆ.

# ನಿವರಗಿ ಸಂಗಮೇಶ್ವರ ಪ್ರೌಢ ಶಾಲೆಯ ಉತ್ತಮ ಫಲಿತಾಂಶ

ಉದಯರಶ್ಮಿ ನ್ಯೂಸ್

ವಿಜಯಪುರ: ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಚಡಚಣ ತಾಲೂಕಿನ ನಿವರಗಿ ಗ್ರಾಮದ ಶ್ರೀ ಸಂಗಮೇಶ್ವರ ಪ್ರೌಢ ಶಾಲೆ ವಿದ್ಯಾರ್ಥಿಗಳು ಶೇ.79.10% ಫಲಿತಾಂಶವನ್ನು ದಾಖಲಿಸಿದ್ದಾರೆ. ಪರೀಕ್ಷೆಗೆ ಕುಳಿತ 67 ವಿದ್ಯಾರ್ಥಿಗಳ ಪೈಕಿ 53 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಪ್ರಜ್ವಲ ನರೂಣಿ ಶೇ.95.84% ಪ್ರಥಮ, ನಿಖಿತಾ ಹಳದಕಿ



ಶೇ.94.08% ದ್ವಿತೀಯ, ಚೇತನ ಕರ್ಜಗಿ ಶೇ.90.72% ಅಂಕಗಳನ್ನು ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಅಲ್ಲದೇ ರಕ್ಷಿತಾ ಬಿರಾದಾರ ಗಣಿತ ವಿಷಯದಲ್ಲಿ 100ಕ್ಕೆ 100 ಅಂಕ, ನಿಖಿತಾ ಹಳದಕಿ ಮತ್ತು ಚೇತನ ಕರ್ಜಗಿ 100ಕ್ಕೆ 100 ಅಂಕಗಳನ್ನು ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಪ್ರಕಾಶ ಪಾಟೀಲ, ಮುಖ್ಯ ಗುರು ರವಿಕುಮಾರ ನಾಯಕ ಸಂಸ್ಥೆಯ ಸರ್ವ ಸದಸ್ಯರುಗಳು, ಶಾಲೆಯ ಸಿಬ್ಬಂದಿ ವರ್ಗ ಹಾಗೂ ಗ್ರಾಮಸ್ಥರು ಮೆಚ್ಚುಗೆ ಸೂಚಿಸಿದ್ದಾರೆ.

# ಬಂಜಾರಾ ಪ್ರೌಢ ಶಾಲೆ ಮಕ್ಕಳ ಉತ್ತಮ ಸಾಧನೆ



ಉದಯರಶ್ಮಿ ನ್ಯೂಸ್

ವಿಜಯಪುರ: ಪಟ್ಟಣದ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಬಂಜಾರಾ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಮಕ್ಕಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಗೈದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಒಟ್ಟು 30 ವಿದ್ಯಾರ್ಥಿಗಳಲ್ಲಿ 28 ವಿದ್ಯಾರ್ಥಿಗಳು (ಶೇ.98) ಉತ್ತೀರ್ಣರಾಗಿದ್ದಾರೆ.

ಚಂಚಲಾ ಕಾಂಬಳೆ ಶೇ.90.16 ಪ್ರಥಮ, ಲಕ್ಷ್ಮೀ ರಾಠೋಡ ಶೇ.88.24 ದ್ವಿತೀಯ, ಐಶ್ವರ್ಯ ಪಟ್ಟಣದ ಶೇ.85.56 ತೃತೀಯ ಸ್ಥಾನವನ್ನು ಪಡೆದಿದ್ದಾರೆ. ಉಳಿದಂತೆ ಸುಹಾಸಿನಿ ಕಿಟ್ಟದ ಶೇ.84.78, ಆದರ್ಶ ರಾಠೋಡ ಶೇ.80.28 ಅಂಕಗಳನ್ನು ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಮುಖ್ಯಗುರು ಸಂದೀಪ ರಾಠೋಡ, ಸಂಸ್ಥೆಯ ಅಧ್ಯಕ್ಷ ಡಿ.ಎಲ್.ಚವ್ಹಾಣ್, ಕಾರ್ಯಾಧ್ಯಕ್ಷ ಕೆ.ಜಿ.ರಾಠೋಡ, ಕಾರ್ಯದರ್ಶಿ ರಾಜಶೇಖರ ಚವ್ಹಾಣ್, ಶಾಲಾ ಆಡಳಿತ ಮಂಡಳಿ, ಶಿಕ್ಷಕ ಸಿಬ್ಬಂದಿ ವರ್ಗ ಹರ್ಷವ್ಯಕ್ತಪಡಿಸಿದ್ದಾರೆ.

# "ಸಹೃದಯ ಕಾವ್ಯ" ಪುರಸ್ಕಾರಕ್ಕೆ ಸುಮಿತ್ ಮೇತ್ರಿ ಆಯ್ಕೆ

ಉದಯರಶ್ಮಿ ನ್ಯೂಸ್



ಚಡಚಣ: ಸಹೃದಯ ಸಾಹಿತ್ಯ ಪ್ರತಿಷ್ಠಾನ (ರಿ) ಕೊಡಮಾಡುವ ಸಹೃದಯ ಕಾವ್ಯ ಪುರಸ್ಕಾರಕ್ಕೆ ಹಲಸಂಗಿಯ ಕವಿ ಸುಮಿತ್ ಮೇತ್ರಿ ಆಯ್ಕೆಯಾಗಿದ್ದಾರೆ.

2019ರ ಕರ್ನಾಟಕ ಸಾಹಿತ್ಯ ಅಕಾಡೆಮಿ ಯುವಕವಿ ಪುರಸ್ಕಾರ, ಕನ್ನಡ ಸಾಹಿತ್ಯ ಪರಿಷತ್ತಿನ ಪ್ರೊ.ಡಿ.ಸಿ.ಅನಂತಸ್ವಾಮಿ ದತ್ತಿ, ಸಾಹಿತ್ಯ ಸಂಗಮ ಕೊಡಮಾಡುವ ಹರಿಹರ ಪ್ರಶಸ್ತಿ, ಸಾಹಿತ್ಯ ಚಿಗುರು, ಸಾಹಿತ್ಯ ಸಿರಿ ಪ್ರಶಸ್ತಿ ಮತ್ತು ಎರಡು ಬಾರಿ ಸಮೀರವಾಡಿ ಕಾವ್ಯ ಪುರಸ್ಕಾರ ಸೇರಿದಂತೆ ಹಲವು ಪುಸ್ತಕ ಬಹುಮಾನ ಹಾಗೂ ಜನಮಿತ್ರ, ಜನಶಕ್ತಿ ಹೀಗೆ ಹಲವು ಕಾವ್ಯಸ್ಪರ್ಧೆಗಳಿಂದ ಪುರಸ್ಕೃತರಾಗಿರುವ ಇವರ ಕವಿತೆಗಳು ಇಂಗ್ಲಿಷ್ ಒಳಗೊಂಡಂತೆ ಭಾರತದ ಇತರ ಭಾಷೆಗಳಿಗೂ ಅನುವಾದಗೊಂಡಿವೆ. ಹೊಸ ಕನ್ನಡ ಕಾವ್ಯದ ಅತ್ಯಾಕರ್ಷಕ ಧ್ವನಿಗಳಲ್ಲಿ ಒಬ್ಬರಾಗಿ, ಧಗಧಗಿಸುವ ನಿಶ್ಯಬ್ದದೊಂದಿಗೆ ಆತ್ಮವಿಶ್ವಾಸ, ನಿರ್ಭೀತವಾಗಿ ಹೊಸ ಸಾಧ್ಯತೆಗಳ ಹುಡುಕಾಟದಲ್ಲಿ ಇರುವ ಇವರ ಕವಿತೆಗಳು ಕಾವ್ಯಾಸಕ್ತರ ಗಮನ ಸೆಳೆದಿವೆ. ಈಗ ಇವರ "ಈ ಕಣ್ಣುಗಳಿಗೆ ಸದಾ ನೀರಡಿಕೆ" ಕವನ ಸಂಕಲನಕ್ಕೆ ಸಹೃದಯ ಕಾವ್ಯ ಪ್ರಶಸ್ತಿ ದೊರೆತಿದೆ.

# ಶ್ರೀ ಸಿದ್ಧೇಶ್ವರ ಸ್ವಾಮೀಜಿ ಪ್ರೌಢಶಾಲೆಯ ಉತ್ತಮ ಸಾಧನೆ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಶ್ರೀ ಸಿದ್ಧೇಶ್ವರ ಸ್ವಾಮೀಜಿ ಪ್ರೌಢಶಾಲೆಯ ಆಂಗ್ಲ ಮಾಧ್ಯಮದ ವಿದ್ಯಾರ್ಥಿಗಳು 2024 ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಆಂಗ್ಲ ಮಾಧ್ಯಮದಲ್ಲಿ ಪ್ರಭಂಜನ ಕುಲಕರ್ಣಿ–602 (ಶೇ 96.32), ಚೇತನಾ ಬುದ್ನಿ–595 (ಶೇ 95.2), ಪವಿತ್ರಾ ಸಜ್ಜನ–595 (ಶೇ 95.2), ಉನ್ನತ ಸಾಧನೆ ಮಾಡಿದ್ದು, ಶಾಲೆಗೆ ಉತ್ತಮ ಫಲಿತಾಂಶ ಬಂದಿದೆ ಎಂದು ಸಂಸ್ಥೆಯ ವಿ.ಕೆ.ಪಾಟೀಲ ತಿಳಿಸಿದ್ದಾರೆ.






## ಎಸ್.ಎಸ್.ಎಲ್.ಸಿ.ಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ

# ಸತತ ಪರಿಶ್ರಮದಿಂದ ಯಶಸ್ಸು ಸಾಧ್ಯ :ಡಿಸಿ ಟಿ.ಭೂಬಾಲನ್

ಉದಯರಶ್ಮಿ ನ್ಯೂಸ್




ವಿಜಯಪುರ: ಸತತ ಪರಿಶ್ರಮ ಹಾಗೂ ಆತ್ಮಸ್ಥೈರ್ಯದಿಂದ ಬದುಕಿನಲ್ಲಿ ಸಾಧನೆಗೈಯ್ಯಲು ಸಾಧ್ಯವಾಗುತ್ತದೆ. ಬಡತನ ಮತ್ತು ಬದುಕಿನ ಕಷ್ಟ ಕಾರ್ಪಣ್ಯಗಳೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಸತತ ಓದಿನಿಂದ ಏನನ್ನಾದರೂ ಸಾಧನೆ ಮಾಡಬೇಕೆಂಬ ಛಲದೊಂದಿಗೆ ಉತ್ತಮ ಸಾಧನೆಗೈದ ನೀವು ಇತರೆ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದೀರಿ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸಿದರು.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆಯೊಂದಿಗೆ 2024ರ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದು ಸಾಧನೆಗೈದ ಜಿಲ್ಲೆಯ ವಿವಿಧ ಮಾಧ್ಯಮಗಳಲ್ಲಿ ಜಿಲ್ಲೆಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನಗಳನ್ನು ಗಳಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಪ್ರೋತ್ಸಾಹಿಸಿದರು.

ಸಾರ್ವಜನಿಕ ಆಡಳಿತ ವ್ಯವಸ್ಥೆಯಲ್ಲಿ ಗರಿಷ್ಟ ಪ್ರಮಾಣದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಉಪಕ್ರಮಗಳನ್ನು ಅಳವಡಿಸಿಕೊಂಡಿರುವ ಪ್ರಯುಕ್ತ ಪ್ರತಿಯೊಂದು ಕ್ಷೇತ್ರದಲ್ಲಿಯೂ ದಕ್ಷತೆ ಮತ್ತು ನಿಖರತೆಯ ಪ್ರಮಾಣ ಹೆಚ್ಚಾಗಿರುತ್ತದೆ. ಆರೋಗ್ಯಕರ ಸಾಮಾಜಿಕ ವ್ಯವಸ್ಥೆಯನ್ನು ಹಾಗೂ ಸುಸ್ಥಿರ ಸಾರ್ವಜನಿಕ ವ್ಯವಸ್ಥೆಯನ್ನು ಬಲಗೊಳಿಸಲು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಮಾತ್ರ ಮಾನವಸಂಪನ್ಮೂಲವನ್ನು ನಿರ್ಧ–ರಿಸುವ ಕಾರಣದಿಂದಾಗಿ ಇಂದಿನ ವಿದ್ಯಾರ್ಥಿಗಳು ನಿರಂತರ ಓದು, ಕರಾರುವಾಕ್ ಅಧ್ಯಯನ ಇತ್ಯಾದಿ ಕೌಶಲಗಳನ್ನು ಕಾಲಕ್ಕೆ ತಕ್ಕಂತೆ ಬೆಳೆಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಶಾಲಾ ಶಿಕ್ಷಣ ಇಲಾಖೆಯು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರೂಪಿಸಿ ಅನುಷ್ಠಾನಗೊಳಿಸುತ್ತಿರುವ ಹಲವಾರು ಪರಿಣಾಮಕಾರಿ ಯೋಜನೆಗಳ ಫಲಶ್ರುತಿಯಾಗಿ ಇಂದು ಜಿಲ್ಲೆಯ ಹಲವಾರು ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದು ಜಿಲ್ಲೆಗೆ ಮತ್ತು ಶಾಲಾ ಶಿಕ್ಷಣ ಇಲಾಖೆಗೆ ವಿಶೇಷ ಗೌರವ ತಂದುಕೊಟ್ಟಿರುವುದು ಅತ್ಯಂತ ಹೆಮ್ಮೆಯ ಮತ್ತು ಸಂತೋಷದ ಸಂಗತಿಯಾಗಿದೆ.

ವಿದ್ಯಾರ್ಥಿಗಳ ಸತತ ಪರಿಶ್ರಮ, ಶಿಕ್ಷಕರ ಕಾರ್ಯತತ್ಪರತೆ ಮತ್ತು ಇಲಾಖಾ ಅಧಿಕಾರಿಗಳ ಸಮಯೋಚಿತ ಮಾರ್ಗದರ್ಶನ ಮತ್ತು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ವ್ಯವಸ್ಥೆಯ ನೈತಿಕ ಬೆಂಬಲ ಮತ್ತು ಪ್ರೋತ್ಸಾಹದಿಂದಾಗಿ ಜಿಲ್ಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಲು ಸಾಧ್ಯವಾಗಿದ್ದು, ಶ್ರಮಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರು ಮಾತನಾಡಿ, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದಿದ್ದು, ಹೆಮ್ಮೆಯ ವಿಷಯ. ಶಾಲಾ ಶಿಕ್ಷಣ ಇಲಾಖೆಯ ಅಧಿಕಾ–ರಿಗಳು ಮತ್ತು ಶಿಕ್ಷಕರು ಹಾಗೂ ಪಾಲಕರು ಮಕ್ಕಳ ಈ ಸಾಧನೆಗಾಗಿ ಅಭಿನಂದನಾರ್ಹವಾಗಿದ್ದಾರೆ. ಮುಂದಿನ ದಿನಗಳಲ್ಲಿಯೂ ಕೂಡ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಗುಣಾತ್ಮಕ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಇನ್ನಷ್ಟು ಉತ್ತಮ ಸಾಧನೆಗೆ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಉಮಾದೇವಿ ಸೊನ್ನದ, ಶಿಕ್ಷಣಾಧಿಕಾರಿ ಡಾ.ಅಶೋಕ ಮ. ಲಿಮಕರ, ಕ್ಷೇತ್ರ–ಶಿಕ್ಷಣಾಧಿಕಾ–ರಿಗಳಾದ ಬಸವರಾಜ.ತಳವಾರ.. ಪ್ರಮೋದಿನಿ ಬಳೋಳಮಟ್ಟಿ, ಬಸವರಾಜ.ಎಸ್.ಸಾವಳಗಿ ಮತ್ತು ಎಲ್ಲ ಹನ್ನೊಂದೂ ವಿದ್ಯಾರ್ಥಿಗಳ ಶಾಲಾ ಮುಖ್ಯ ಶಿಕ್ಷಕರು, ಶಿಕ್ಷಕರು, ಪಾಲಕರು, ಪೋಷಕರು ಹಾಗೂ ಹಿತೈಷಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಇಂದು ಕಸಾಪದಿಂದ ಬಸವ ಜಯಂತಿ ಆಚರಣೆ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ವಿರಕ್ತಮಠದಲ್ಲಿ ಮೇ. 11 ರಂದು ಸಂಜೆ 6 ಗಂಟೆಗೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಸಾಂಸ್ಕೃತಿಕ ನಾಯಕ ಬಸವೇಶ್ವರರ ಜಯಂತಿ ಆಚರಣೆ ಕಾರ್ಯಕ್ರಮ ಹಮ್ಮಿಕೊಂಡಿದೆ. ಸಾನಿಧ್ಯವನ್ನು ಸಿದ್ದಲಿಂಗ ಸ್ವಾಮೀಜಿ, ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಸಿಂಪೀರ ವಾಲೀಕಾರ ಉದ್ಘಾಟಿಸುವರು. ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಪುಷ್ಪಾರ್ಚನೆ ನೆರವೇರಿಸುವರು. ಅಧ್ಯಕ್ಷತೆಯನ್ನು ತಾಲೂಕು ಕಸಾಪ ಅಧ್ಯಕ್ಷ ಶಿವಾನಂದ ಡೋಣೂರ ವಹಿಸುವರು. ಮಹಮ್ಮದಗೌಸ ಹವಾಲ್ದಾರ ಉಪನ್ಯಾಸ ನೀಡುವರು. ಮುಖ್ಯಅತಿಥಿಗಳಾಗಿ ರಾಜ್ಯ ವಿಮಾ ಸಹಕಾರ ಮಹಾಮಂಡಳ ಅಧ್ಯಕ್ಷ ಶಿವನಗೌಡ ಬಿರಾದಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾ–ರಿವಾಳ, ವಕೀಲ ಬಿ.ಕೆ.ಕಲ್ಲೂರ, ಪಿಕೆಪಿಎಸ್ ಬ್ಯಾಂಕಿನ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಫ್.ಡಿ.ಮೇಟಿ, ಮುಖಂಡರಾದ ಸಂಗಮೇಶ ಓಲೇಕಾರ, ಅಶೋಕ ಹಾರಿವಾಳ, ಎಂ.ಎನ್. ಅಂಗಡಗೇರಿ ಆಗಮಿಸುವರು ಎಂದು ತಾಲೂಕು ಕಸಾಪ ಪ್ರಕಟಣೆ ತಿಳಿಸಿದೆ.

# ಸಂಭ್ರಮದ ಕಲ್ಯಾಣದೇಶ್ವರ ರಥೋತ್ಸವ

ಉದಯರಶ್ಮಿ ನ್ಯೂಸ್



ಗೋಲಗೇರಿ: ಸಿಂದಗಿ ತಾಲೂಕಿನ ಸುಕ್ಷೇತ್ರ ಹೊನ್ನಳ್ಳಿ – ಬ್ರಹ್ಮದೇವನಮಡು ಗ್ರಾಮದ ಕಲ್ಯಾಣದೇಶ್ವರ ರಥೋತ್ಸವ ಸಾವಿರಾರು ಭಕ್ತ ಸಮೂಹದ ಮಧ್ಯೆ ಶುಕ್ರವಾರ ಸಂಜೆ ವಿಜೃಂಭಣೆಯಿಂದ ಜರುಗಿತು. ಭಕ್ತರು ರಥಕ್ಕೆ ಉತ್ತತ್ತಿ, ಬಾಳೆಹಣ್ಣು, ಕಾಯಿ ಕಪೂ9ರ ಒಡೆದು ಭಕ್ತಿ ಸಮಪಿ9ಸಿದರು. ವಿವಿಧ ವಾದ್ಯ ವೈಭವಗಳು ರಥೋತ್ಸವಕ್ಕೆ ಮೆರಗು ತಂದವು.

ಬೆಳಗ್ಗೆ ಕಲ್ಯಾಣದೇಶ್ವರ ಕತೃ9 ಗದ್ದುಗೆಗೆ ರುದ್ರಾಭಿಷೇಕ, ವಿಶೇಷ ಪೂಜೆ ಸಲ್ಲಿಸಲಾಯಿತು. ಸಂಜೆ ಆಲೂರು ಕೆಂಚವೃಷಭೇಂದ್ರ ಶಿವಾಚಾಯ9ರು, ಸಿಂದಗಿಯ ಸಾರಂಗಮಠದ ಡಾ.ಪ್ರಭು ಸಾರಂಗದೇವ ಶಿವಾಚಾಯ9ರು, ಶ್ರೀಮಠದ ಒಡೆಯ ಕಲ್ಯಾಣದಯ್ಯ ವೀರಘಂಟಯ್ಯ ಸ್ವಾಮೀಜಿ, ವಡವಡಗಿಯ ಶ್ರೀಗಳ ಸಾನ್ನಿಧ್ಯದಲ್ಲಿ ಕಲ್ಯಾಣದೇಶ್ವರ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ದೇವಸ್ಥಾನದಿಂದ ಪಾದಗಟ್ಟಿವರೆಗೆ ರಥ ಸಾಗುತ್ತಿದ್ದಂತೆ ಭಕ್ತರು ಜಯಘೋಷ ಕೂಗಿದರು. ದೇವಸ್ಥಾನವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿ–ತ್ತು. ಕಲ್ಯಾಣದೇಶ್ವರ ಜಾತ್ರಾ ಸಮಿತಿ ಹಾಗೂ ಸುತ್ತ ಮುತ್ತಲಿನ ಹಳ್ಳಿಗಳ ಭಕ್ತರು ಪಾಲ್ಗೊಂಡಿದ್ದರು. ಪೋಟು ಗೋಲಗೇರಿ 10–02 ಸಿಂದಗಿ ತಾಲೂಕಿನ ಸುಕ್ಷೇತ್ರ ಹೊನ್ನಳ್ಳಿ – ಬ್ರಹ್ಮದೇವನಮಡು ಗ್ರಾಮದ ಕಲ್ಯಾಣದೇಶ್ವರ ರಥೋತ್ಸವ ಶುಕ್ರವಾರ ಸಂಜೆ ಸಾವಿರಾರು ಭಕ್ತ ಸಮೂಹದ ಮಧ್ಯೆ ವಿಜೃಂಭಣೆಯಿಂದ ಜರುಗಿತು.

# ಭಾರತೀಯ ಶಾಸ್ತ್ರೀಯ ನೃತ್ಯ.. ಒಂದು ಅವಲೋಕನ

ಉದಯರಶ್ಮಿ ದಿನಪತ್ರಿಕೆ

ವೀಣಾಂತರಂಗ



–ವೀಣಾ ಎಚ್. ಪಾಟೀಲ್, ಮುಂಡರಗಿ

ಆ ಒಂದು ಹಾಲ್ನಲ್ಲಿ ಕುಳಿತಿದ್ದ ಎಲ್ಲ ಮಕ್ಕಳು, ಹಿರಿಯರಾದಿಯಾಗಿ ಸಂಗೀತದ ತಾಳಕ್ಕೆ ತಕ್ಕಂತೆ ತಮ್ಮ ತಲೆಯನ್ನು ಕುಣಿಸುತ್ತಾ ಕಾಲ್ ಬೆರಳನ್ನು ನೆಲಕ್ಕೆ ಕುಟ್ಟುತ್ತಿದ್ದರು. ಇದುವೇ ನೃತ್ಯದ ಮೂಲ

ನೃತ್ಯ ಜೀವನದ ಒಂದು ಭಾಗ, ಜೀವನವೇ ಆಗಿದೆ. ನಮ್ಮೆಲ್ಲಾ ನೋವು ನಿರಾಸೆಗಳನ್ನು ಮರೆಯಲು ಹುಮ್ಮಸ್ಸನ್ನು ಪಡೆಯಲು ಮತ್ತೆ ಜೀವನ್ಮುಖತೆಯನ್ನು ಹೊಂದಲು ನೃತ್ಯವು ಸಂಜೀವಿನಿಯಂತೆ ಕಾರ್ಯನಿರ್ವಹಿಸುತ್ತದೆ. ಅಂತಹ ನೃತ್ಯ ವನ್ನು ಪ್ರಸಿದ್ಧಿಗೊಳಿಸಲು ತಮ್ಮ ತಮ್ಮ ಸುರಕ್ಷತಾ ವಲಯಗಳಿಂದ ಹೊರಬಂದು ಸಾಕಷ್ಟು ಕಷ್ಟನಿಷ್ಠುರಗಳ ನಡುವೆ ಭಾರತೀಯ ಶಾಸ್ತ್ರೀಯ ನೃತ್ಯವನ್ನು ಜಗತ್ತಿಗೆ ಪರಿಚಯಿಸಿದವರು.

ಪಾಶ್ಚಾತ್ಯ ವೇಷ ಧರಿಸಿದ ಹೆಣ್ಣು ಮಗಳು ತಾನು ಭೇಟಿ ಕೊಡಲು ಬಯಸಿದ ಕ್ಲಬ್ ಬಾಗಿಲು ಮುಚ್ಚಿದ್ದನ್ನು ಕಂಡು ಪಕ್ಕದಲ್ಲಿರುವ ಸಭಾಂಗಣಕ್ಕೆ ಬಂದು ಕುಳಿತಳು. ಅಲ್ಲಿ ನಡೆಯುತ್ತಿದ್ದ ನೃತ್ಯವನ್ನು ಕಂಡು ಪರವಶಳಾದ ಆಕೆ ನೃತ್ಯ ಮುಗಿಯುತ್ತಿದ್ದಂತೆ ಗ್ರೀನ್ ರೂಮಿಗೆ ಹೋಗಿ ಆ ನೃತ್ಯವನ್ನು ಮಾಡುತ್ತಿದ್ದ ತಂಡದ ಮಹಾ ಗುರುವಿನ ಬಳಿ ಹೋಗಿ ತನಗೂ ಕೂಡ ನೃತ್ಯವನ್ನು ಕಲಿಸುವಂತೆ ಕೇಳಿಕೊಂಡಳು. ಆಕೆಯ ವೇಷ ಭೂಷಣ, ಮಾದಕ ಮೇಕಪ್ ನೋಡಿದ ಗುರುಗಳು ಕೊಂಚ ಅಸಡ್ಡೆಯಿಂದಲೆ ಆಕೆಗೆ ಈ ಕಲೆ ಒಲಿಯಲು ಮಹಾ ತಪಸ್ಸು ಬೇಕು. ನಿನಗೆ ನಿಜವಾಗಿಯೂ ನೃತ್ಯ ಕಲಿಯುವ ಆಸೆ, ಆಸಕ್ತಿ ಇದ್ದರೆ ನಾಳೆ



ಮಧ್ಯಾಹ್ನ ನಾನು ವಾಸಿಸುವ ಸ್ಥಳಕ್ಕೆ ಬಂದು ತಲುಪಬೇಕು. ಆದರೆ ನೃತ್ಯ ಕಲಿಯಲು ಈ ವೇಷಭೂಷಣಗಳು ಸರಿ ಹೋಗುವುದಿಲ್ಲ, ಭಾರತೀಯ ಸೀರೆ ಮತ್ತಿತರ ಉಡುಪುಗಳನ್ನು ಧರಿಸಬೇಕು, ಗುರುಕುಲದಲ್ಲಿ ಇರುವಷ್ಟು ದಿನ ಯಾವುದೇ ಹಮ್ಮು ಬಿಮ್ಮು ಇಟ್ಟುಕೊಳ್ಳದೆ ಗುರುಕುಲದ ಇತರ ಮಕ್ಕಳಲ್ಲಿ ಒಬ್ಬರಾಗಿ ಜೀವಿಸಬೇಕು ಎಂದು ಕಠೋರವಾಗಿ ನುಡಿದರು.

ಅವರ ಎಲ್ಲ ಮಾತುಗಳಿಗೆ ಒಪ್ಪಿದ ಆಕೆ ಕೂಡಲೇ ಮನೆಗೆ ಬಂದು ಪ್ರಖ್ಯಾತ ಮಾಡಲಾಗಿದ್ದ ತನ್ನ ಪತಿಗೆ ತನ್ನ ಎರಡು ಮಕ್ಕಳ ಸುಪರ್ದಿಯನ್ನು ವಹಿಸಿ ಪಶ್ಚಿಮ ಬಂಗಾಳ ರಾಜ್ಯದ ರಾಜಧಾನಿ ಕೊಲ್ಕತ್ತಾಗೆ ಪಯಣ ಬೆಳೆಸಿದಳು.

ಅಲ್ಲಿನ ಮಾರುಕಟ್ಟೆಯಲ್ಲಿ ಹತ್ತಾರು ಕಾಟನ್ ಸೀರೆಗಳನ್ನು ಖರೀದಿಸಿ ಅವುಗಳಿಗೆ ಕುಪ್ಪಸಗಳನ್ನು ಕೂಡ ಅಲ್ಲಿಯೇ ಹೊಲಿಸಿದಳು. ನಂತರ ಕೆಲ ಭಾರತೀಯ ಉಡ–ುಪುಗಳನ್ನು ಕೂಡ ಖರೀದಿಸಿದಳು. ಮುಂಬೈಯಿಂದ ಆ ಗುರುಗಳು ತಮ್ಮೂರಿಗೆ ಮರಳುವ ಸಮಯಕ್ಕೆ ಸರಿಯಾಗಿ ಅವರ ಮನೆಯ ಮುಂದೆ ಹಣೆಯ ಮೇಲೆ ತಿಲಕವನ್ನಿಟ್ಟು ಅಪ್ಪಟ ಭಾರತೀಯ ನಾರಿಯ ಹಾಗೆ ಸೀರೆಯನ್ನುಟ್ಟ ಈ ಮಹಿಳೆ ಬಂದು ನಿಂತಳು.

ಆಕೆಯನ್ನು ಗುರುಗಳು ಸಖೇದಾಶ್ಚರ್ಯದಿಂದ ದಿಟ್ಟಿಸಿ ನೋಡಿ ಮುಂದೆ ಈಕೆ ಭಾರತ ದೇಶದ ಬಹು ದೊಡ್ಡ ನೃತ್ಯಗಾತಿಯಾಗಿ ಪ್ರಖ್ಯಾತಳಾಗುವಳು ಎಂದು ಭವಿಷ್ಯ ನುಡಿದರು.

ಮುಂದಿನ ಹಲ ವರ್ಷಗಳು ಆಕೆ ದಿನವೊಂದಕ್ಕೆ 13 ರಿಂದ 14 ಗಂಟೆಗಳ ಕಾಲ ನೃತ್ಯದ ಅಭ್ಯಾಸವನ್ನು ಮಾಡಿದಳು. ಅತ್ಯಂತ ಕಠಿಣ ಸ್ವರೂಪಿ ಗುರುಗಳ ಕೈಯಲ್ಲಿ ಪಳಗಿದ ಆಕೆ ಓಡಿಸ್ಸಿ ನೃತ್ಯದಲ್ಲಿ ಪಾರಂಗಿತಳಾದಳು.ಆಕೆಯೇ ಭಾರತದ ಪ್ರಖ್ಯಾತ ನೃತ್ಯಗಾತಿ ಪ್ರತಿಮಾ ಬೇಡಿ ಮತ್ತು ಆಕೆಗೆ ವಿದ್ಯೆ ನೀಡಿದ ಗುರು ಪದ್ಮವಿಭೂಷಣ ಡಾ.ಕೇಳು ಚರಣ್ ಮಹಾಪಾತ್ರ.

ಓಡಿಸಿ ನೃತ್ಯದಲ್ಲಿ ಪರಿಣಿತಳಾದ ಪ್ರತಿಮಾ ಬೇಡಿ ಗುರುಗಳ ಆದೇಶದ ಮೇರೆಗೆ ಮುಂಬೈಗೆ ತೆರಳಿ ಅಲ್ಲಿಯೇ ಒಂದು ನೃತ್ಯ ಸಂಸ್ಥೆಯನ್ನು ತೆರೆದು ಓಡಿಸ್ಸಿ ನೃತ್ಯವನ್ನು ಕಲಿಸ ತೊಡಗಿದರು. ಮುಂದೆ 1989 ರಲ್ಲಿ ಬೆಂಗಳೂರಿನ ಬಳಿಯ ಕರ್ನಾಟಕ ಸರ್ಕಾರದ ಸಹಯೋಗದೊಂದಿಗೆ ನೃತ್ಯ ಗ್ರಾಮವನ್ನು ನಿರ್ಮಿಸಿದರು. ಎಲ್ಲ ಶಾಸ್ತ್ರೀಯ ನೃತ್ಯ ಪ್ರಕಾರಗಳನ್ನು ಕಲಿಸುವ ಈ ನೃತ್ಯ ಗ್ರಾಮದ ನಿರ್ವಾಹಕಿಯಾಗಿ ಎಂಟು ವರ್ಷಗಳ ಕಾಲ ಸತತವಾಗಿ ಕಾರ್ಯನಿರ್ವಹಿಸಿದ ಪ್ರತಿಮಾ ಬೇಡಿ ನಂತರ ಅಮರನಾಥ ಯಾತ್ರೆಗೆ ಹೋಗುವಾಗ ಹಿಮಾಲಯದಲ್ಲಿ ಉಂಟಾದ ಭೂಕುಸಿತದಲ್ಲಿ ಸಿಲುಕಿ ಕಣ್ಮರೆಯಾದರು.

ಸುಸಂಸ್ಕೃತ ಶಾಸ್ತ್ರಿಗಳ ಕುಟುಂಬದಲ್ಲಿ ಹುಟ್ಟಿ ಬೆಳೆದ ರುಕ್ಮಿಣಿದೇವಿಯೆಂಬ ಯುವತಿ ಡಾ. ಜಿ.ಎಸ್.ಅರುಂಡೇಲ್ ರನ್ನು ವಿವಾಹವಾಗಿ ರಷ್ಯಾ ದೇಶಕ್ಕೆ ಪಯಣಿಸಿದರು. ಅಲ್ಲಿನ ಪ್ರಸಿದ್ಧ ಬ್ಯಾಲೆ ನೃತ್ಯಗಾತಿಯ ಬಳಿ ಶಿಷ್ಯತ್ವವನ್ನು ಸ್ವೀಕರಿಸಿದ ರುಕ್ಮಿಣಿ ದೇವಿ ಮುಂದೆ ಭಾರತದ ಎಲ್ಲ ಶಾಸ್ತ್ರೀಯ ಕಲೆಗಳಿಗೆ ಮರುಜೀವ ನೀಡಿದರಲ್ಲದೆ ಭರತನಾಟ್ಯಕ್ಕೆ ಹೊಸ ತಿರುವನ್ನು ತಂದುಕೊಟ್ಟರು. ಇದುವರೆಗೂ ಕೇವಲ ದೇವದಾಸಿಯರು ಮಾತ್ರ ಮಾಡುವ ನೃತ್ಯವೆಂದು ಹೆಸರಾಗಿದ್ದ ಭರತನಾಟ್ಯ ನೃತ್ಯವನ್ನು ಎಲ್ಲರೂ ಕಲಿಯಲು ಪ್ರೋತ್ಸಾಹಿಸಿದರು. ಮರಳಿ ಭಾರತಕ್ಕೆ ಬಂದ ಮೇಲೆ ಮದರಾಸಿನಲ್ಲಿ ಎಲ್ಲ ಶಾಸ್ತ್ರೀಯ ಕಲೆಗಳನ್ನು ಕಲಿಯಲು ಅನುಕೂಲವಾಗುವಂತಹ ಸಭಾಭವನ ಒಂದನ್ನು ನಿರ್ಮಿಸಿದರಲ್ಲದೇ ಎಲ್ಲಾ ರೀತಿಯ ಗುರುಗಳನ್ನು ಅಲ್ಲಿ ಕರೆಸಿ ಶಾಸ್ತ್ರೀಯ ನೃತ್ಯ ಪ್ರಕಾರಗಳನ್ನು ಕಲಿಯಲು ಅನುವು ಮಾಡಿಕೊಟ್ಟರು.



ತಾವಿರುವ ಪರಿಸರದಿಂದ ಸಂಪೂರ್ಣ ವಿಭಿನ್ನವಾದ ಪರಿಸರದಲ್ಲಿ ಇದ್ದರೂ ಕೂಡ ನೃತ್ಯ ಕಲೆಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಈ ಮಹಿಳೆಯರು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತೀಯ ನೃತ್ಯವನ್ನು ಪ್ರಸಿದ್ದಗೊಳಿಸಿದರು

# ಸಿಂದಗಿ: ವಿವಿಧೆಡೆ ಬಸವ ಮತ್ತು ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಉದಯರಶ್ಮಿ ನ್ಯೂಸ್




ಸಿಂದಗಿ: ಬಸವಣ್ಣನವರು 12ನೆಯ ಶತಮಾನದಲ್ಲಿ ಅನುಭವ ಮಂಟಪದ ಮೂಲಕ ಪ್ರತಿಪಾದಿಸಿ ಲಿಂಗಬೇಧ, ವರ್ಗಬೇಧಗಳನ್ನು ತೊಲಗಿಸಿ ಸಮಾಜದ ಸರ್ವತೋಮುಖ ಬೆಳವಣಿಗೆಗೆ ನೀಡಿದ ಕೊಡುಗೆ ಅನನ್ಯ ಎಂದು ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಹೇಳಿದರು.

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ಬಸವ ಮತ್ತು ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ನಿಮಿತ್ಯವಾಗಿ ಹಮ್ಮಿಕೊಂಡ ಪೂಜಾ ಕಾರ್ಯಕ್ರಮದಲ್ಲಿ ಇಬ್ಬರೂ ಮಹನೀಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ನುಡಿದಂತೆ ನಡೆದ ವಚನಗಳ ಮೂಲಕ ಸಮಾನತೆ, ಕಾಯಕ ತತ್ವ, ದಾಸೋಹ ತತ್ವ ಅವರ ವಿಚಾರಧಾರೆಗಳು ಸರ್ವಕಾಲಕ್ಕೂ ಪ್ರಸ್ತುತ. ಹೇಮರೆಡ್ಡಿ ಮಲ್ಲಮ್ಮ ತಮ್ಮ ಬುದುಕಿನಲ್ಲಿ ಎದುರಿಸಿದ ಕಷ್ಟಗಳನ್ನೇ ಸಾಧನೆಯ ಮೆಟ್ಟಿಲುಗಳನ್ನಾಗಿ ಬದಲಾಯಿಸಿ ಸಮಾಜದ ಒಳಿತಿಗೆ ಶ್ರಮಿಸಿದ್ದಾರೆ ಎಂದರು.

ಈ ವೇಳೆ ಕಂದಾಯ ನೀರಿಕ್ಷಕ ಆಯ್.ಎ.ಮಕಾಂದಾರ, ನೀಖಿಲಅಹ್ಮದ್ ಖಾನಾಪೂರ, ಗುರು ತಾರಾಪೂರ, ಸಿದ್ದಬಸವ ಕುಂಬಾರ, ಆರ್.ಆರ್.ಪಾಟೀಲ ಸೇರಿದಂತೆ ಅನೇಕರಿದ್ದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ:

ಪಟ್ಟಣದ ಎಪಿಎಂಸಿ ಯಾರ್ಡ್‌ನಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾ–ರಿಗಳ ಕಾರ್ಯಾಲಯದಲ್ಲಿ ಬಸವ ಮತ್ತು ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ಆಚರಣೆ ಮಾಡಲಾಯಿತು.

ಈ ವೇಳೆ ಸಿಡಿಪಿಓ ಶಂಭುಲಿಂಗ ಹಿರೇಮಠ ಇಬ್ಬರೂ ಮಹನೀಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಜಯಂತಿಯಲ್ಲಿ ಎಸಿಡಿಪಿಒ–ಎಸ್.ಎನ್.ಕೋರವಾರ, ಸುನಿತಾ ಕಪ್ಪೆಣವರ, ವಿಜಯಕುಮಾರ ಸೇರಿದಂತೆ ಮೇಲ್ವಿಚಾರಕಿಯರು ಇದ್ದರು.

ಶ್ರೀ ಪದ್ಮರಾಜ ಮಹಿಳಾ ಕಾಲೇಜ ಸಿಂದಗಿ:

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಪದವಿ ಮತ್ತು ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಬಸವ ಮತ್ತು ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ಆಚರಣೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಇದ್ದರು.

ಸಾಂತ್ವನ ಮಹಿಳಾ ಸಹಾಯವಾಣಿ ಕೇಂದ್ರ:

ಪಟ್ಟಣದ ಬಂದಾಳ ರಸ್ತೆಯ ಮಲ್ಲಿಕಾರ್ಜುನ ಕಾಂಪ್ಲೇಕ್ಷನಲ್ಲಿರುವ ಸಾಂತ್ವನ ಮಹಿಳಾ ಸಹಾಯವಾಣಿ ಕೇಂದ್ರದಲ್ಲಿ ಬಸವ ಮತ್ತು ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ಆಚರಣೆ ಮಾಡಲಾಯಿತು.

ಈ ವೇಳೆ ರಶ್ಮಿ ನೂಲಾನವರ, ವಿದ್ಯಾಶ್ರೀ ದೇಸಾಯಿ ಸೇರಿದಂತೆ ಅನೇಕರಿದ್ದರು.

ದಲಿತ ಸಂಘರ್ಷ ಸಮಿತಿ ಕಾರ್ಯಾಲಯ:

ನಗರದಲ್ಲಿರುವ ದಲಿತ ಸಂಘರ್ಷ ಸಮಿತಿ ಕಾರ್ಯಾಲಯದಲ್ಲಿ ದಲಿತ ಸಂಘರ್ಷ ಸಮಿತಿ ಕಾರ್ಯಾಲಯದಲ್ಲಿ ಬಸವ ಜಯಂತಿ ಆಚರಣೆ ಮಾಡಲಾಯಿತು.

ಈ ವೇಳೆ ಜಿಲ್ಲಾ ಸಂಚಾಲಕ ವಾಯ್.ಸಿ.ಮಯೂರ ಮಾತನಾಡಿ, ಸಮಾನತೆಯ ಹರಿಕಾರ, ಸುಂದರ ಸಮಾಜದ ಕನಸುಕಾರ, ಕರುನಾಡುಕಂಡ ಮಹಾನ್‌ಚಿಂತಕ ಜಗಜ್ಯೋತಿ ಬಸವಣ್ಣನವರತತ್ವ, ಆದರ್ಶ, ಸಂದೇಶಗಳು ಇಂದಿಗೂ ಪ್ರಸ್ತುತ. ಇವರ ಒಂದೊಂದು ವಚನಗಳೂ ನಮಗೆ ದಾರಿದೀಪ ಎಂದರು.

ಈ ವೇಳೆ ಸಂಗಣ್ಣ ಬ್ಯಾಕೋಡ, ಪ್ರವೀಣ್ ಹಾಲಹಳ್ಳಿ, ಶರಣು ಚಲವಾದಿ, ನೀಲಕಂಠ ಹೂಸಮನಿ, ಶಿವಪುತ್ರ ಮೇಲಿನಮನಿ, ಜೈಭೀಮ್ ಕೊಚಬಾಳ, ಜೈಭೀಮ್ ತಳಕೇರಿ, ಮುತ್ತು ಮಲಘಾಣ ಶೇಖರ ಬಂದಾಳ ಸೇರಿದಂತೆ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತ–ರಿದ್ದರು.



ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಲಿಟಲ್ ವಿಂಗ್ಸ್ ಶಾಲೆಯ ವಿದ್ಯಾರ್ಥಿ ಸಾತ್ವೀಕ ನೂಲಾನವರ ನಾಡಿನ ಸಾಂಸ್ಕೃತಿಕ ನಾಯಕ ಬಸವಣ್ಣವರ ವೇಷ ಧರಿಸಿರುವುದು.



ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಗುರು ಕೃಪಾ ಆಂಗ್ಲ ಮಾಧ್ಯಮ ಶಾಲೆಯ ಮಹಾಂತೇಶ ಶೆಟ್ಟರ ವಿಶ್ವಗುರು ಬಸವಣ್ಣವರ ವೇಷದಲ್ಲಿ ಕಂಗೊಳಿಸುತ್ತಿರುವುದು.



ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಗುರು ಕೃಪಾ ಆಂಗ್ಲ ಮಾಧ್ಯಮ ಶಾಲೆಯ ಮಹಾಂತೇಶ ಶೆಟ್ಟರ ವಿಶ್ವಗುರು ಬಸವಣ್ಣವರ ವೇಷದಲ್ಲಿ ಕಂಗೊಳಿಸುತ್ತಿರುವುದು.

# ಎಲ್ಲ ಧರ್ಮಿಯರು ಸೇರಿ ಆಚರಣೆ ಮಾಡುವುದೇ ಬಸವ ಜಯಂತಿ

ಉದಯರಶ್ಮಿ ನ್ಯೂಸ್

ಸಿಂದಗಿ: ಎಲ್ಲ ಧರ್ಮಿಯರು ಸೇರಿಕೊಂಡು ಆಚರಣೆ ಮಾಡುವುದೇ ಬಸವ ಜಯಂತಿ ಎಂದು ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಹಮ್ಮಿಕೊಂಡ ಬಸವಣ್ಣನವರ 891ನೆಯ ಜಯಂತ್ಯೋತ್ಸವ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಧಾರವಾಡದ ಮೃತ್ಯುಂಜಯ ಮಹಾಸ್ವಾಮಿಗಳು ಮೊಟ್ಟ ಮೊದಲ ಬಾರಿಗೆ ಬಸವ ಜಯಂತಿ ಆಚರಣೆಯನ್ನು ದಾವಣಗೇರಿಯಲ್ಲಿ ಪ್ರಾರಂಭ ಮಾಡಿದರು. ಅಲ್ಲಿಂದ ಇಲ್ಲಿಯವರೆಗೆ ನಿರ್ವಿಘ್ನವಾಗಿ ಅತ್ಯಂತ ವಿಜೃಂಭಣೆಯಿಂದ ಮಾಡಿಕೊಳ್ಳುತ್ತಾ ಬರುತ್ತಿದೆ. ಶರಣರು ನಡೆದು ಬಂದ ದಾರಿಯಲ್ಲಿ ನಾವೆಲ್ಲರೂ ನಡೆಯಬೇಕು. ಅವರ ತತ್ವಾದರ್ಶ ಸಿದ್ಧಾಂತಗಳನ್ನು ಈಗಿನ ಯುವಕರು ಮೈಗೂಡಿಸಿಕೊಳ್ಳಬೇಕು. ಶರಣರ ಜೀವನವನ್ನು ಮುಂದುವರೆಸಿಕೊಂಡ ಹೋಗಬೇಕೆಂದು ಸಂಕಲ್ಪ ಮಾಡಿಕೊಳ್ಳಬೇಕು ಎಂದು ಆಶೀರ್ವದಿಸಿದರು.

ಈ ವೇಳೆ ಶಾಸಕ ಅಶೋಕ ಮನಗೂಳಿ, ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ, ಗುರು ತಾರಾಪೂರ, ಶ್ರೀಶೈಲ ಯಳಮೇಲಿ, ಸಿದ್ದಬಸವ ಕುಂಬಾರ, ಅಶೋಕ ಅಲ್ಲಾಪೂರ, ಆನಂದ ಶಾಬಾದಿ, ವಿಶ್ವನಾಥ ಕುರಡೆ, ಶಾಂತೂ ರಾಣಾಗೋಳ, ಶಿವಾನಂದ ಕಲಬುರ್ಗಿ, ಆರ್.ಆರ್.ಪಾಟೀಲ, ವಾಯ್.ಸಿ. ಮಯೂರ, ಜಗದೀಶ ಪಟ್ಟಣಶೆಟ್ಟಿ (ಶುಂಠಿ) ಸೇರಿದಂತೆ ಬಸವಣ್ಣನವರ ಅನುಯಾಯಿಗಳು ಉಪಸ್ಥಿತರಿದ್ದರು.



# ಬಸವಣ್ಣನವರ ತತ್ವಾದರ್ಶ ಮೈಗೂಡಿಸಿಕೊಳ್ಳಿ :ಸಿದ್ದಲಿಂಗ ಶ್ರೀ

ಉದಯರಶ್ಮಿ ನ್ಯೂಸ್



ಯಡ್ರಾಮಿ: ಬಸವಣ್ಣನವರು ಆಧ್ಯಾತ್ಮಿಕ ಹಾಗೂ ಧಾರ್ಮಿಕವಾಗಿಯೂ ತಮ್ಮನ್ನ ತೊಡಗಿಸಿಕೊಂಡು ಸಮಾಜದ ಎಲ್ಲ ವರ್ಗದ ಜನರನ್ನು ಒಂದು ಎಂದು ಭಾವಿಸಿ ಸರ್ವ ಸಮಾನತೆ ತರಲು ಹೋರಾಡಿದ ಶ್ರೇಷ್ಠ ಸಮಾಜ ಸುಧಾರಕರಾಗಿದ್ದಾರೆ. ಬಸವಣ್ಣನವರು ತತ್ವ ಆದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ಮಾರ್ಗದಲ್ಲಿ ಜೀವನ ಸಾಗಿಸಬೇಕು ಎಂದು ಯಡ್ರಾಮಿ ವಿರಕ್ತಮಠದ ಸಿದ್ದಲಿಂಗ ಮಹಾಸ್ವಾಮಿಗಳು ನುಡಿದರು.

ಯಡ್ರಾಮಿ ಪಟ್ಟಣದಲ್ಲಿ ಶುಕ್ರವಾರ ವಿಶ್ವಗುರು ಬಸವಣ್ಣ ಜಯಂತಿ ಪ್ರಯುಕ್ತ ಬಸವೇಶ್ವರ ವೃತ್ತದಲ್ಲಿ ಷಟಸ್ಥಲ ದ್ವಜಾರೋಹಣ ನಡೆಸಿ ಮಾತನಾಡಿದ ಅವರು, ವಿಶ್ವ ಜಾಗತಿಕ ಇತಿಹಾಸದಲ್ಲಿ ಧರ್ಮ, ಸಮಾಜ ಮತ್ತು ಸಾಹಿತ್ಯ ಸಂವರ್ಧನೆಗಾಗಿ ಸಕಲ ಜೀವಾತ್ಮ–ರಿಗೆ ಲೇಸನ್ನು ಬಯಸಿದವನು ವಿಶ್ವಗುರು ಬಸವಣ್ಣ. ಬಸವಣ್ಣವರು ಜನರಾಡುವ ಭಾಷೆಯಲ್ಲಿ ವಚನ ರಚಿಸಿ ಕನ್ನಡ ಸಾರಸ್ವತ ಲೋಕಕ್ಕೆ ಸಮರ್ಪಿತರಾಗಿದ್ದರು. ಇಂದಿಗೂ ಸಹ ಅವರು ರಚಿಸಿದ ವಚನಗಳು ಮನುಷ್ಯ ಜೀವನದ ಒಂದು ಅಂಗವಾಗಿದೆ ಎಂದು ತಿಳಿಸಿದರು.

ನಂತರ ಪಟ್ಟಣದ ಹಳೆ ಬಜಾರ, ಬಸವೇಶ್ವರ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಬಸವೇಶ್ವರ ದೇವಸ್ಥಾನ ಮಾರ್ಗವಾಗಿ ವಿರಕ್ತ ಮಠದವರೆಗೆ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು ಹಾಗೂ ಬಸವಣ್ಣನವರ ಮೂರ್ತಿಯ ಭವ್ಯ ಮೆರವಣಿಗೆ ನಡೆಯಿತು.

ಈ ವೇಳೆ ಮಹಾನಿಂಗಪ್ಪಗೌಡ ಬಂಡೆಪ್ಪಗೋಳ, ಬಸಲಿಂಗಪ್ಪ ಸಾಹು ಅಂಕಲಕೋಟಿ, ಶಾಂತಗೌಡ ಜವಳಗಿ, ಸಿದ್ರಾಮಪ್ಪಗೌಡ ಮಾಲಿಪಾಟೀಲ, ಚಂದ್ರಶೇಖರ ಪುರಾಣಿಕ, ಪ್ರಕಾಶ ಬೆಲ್ಲದ, ಆನಂದ ಯತ್ನಾಳ, ವಿಜಯಕುಮಾರ ಗುಂದಗಿ, ರಾಘವೇಂದ್ರ ಕುಲಕರ್ಣಿ, ರೇವಣಸಿದ್ದಪ್ಪ ಅಂಕಲಕೋಟಿ, ಬಸವರಾಜ ದೊಡ್ಡಳ್ಳಿ, ಪ್ರಭುದೇವ ಜವಳಗಿ, ಲಿಂಗರಾಜ ಪಟ್ಟಣಶೆಟ್ಟಿ, ಮಲ್ಲಿಕಾರ್ಜುನ ಹೂಗಾರ, ಶರಣು ಸೋಮಪ್ಪಗೋಳ, ಕಾಶಿನಾಥ ಪಾಟೀಲ, ನಾಗಣ್ಣ ಬಿರಾದಾರ, ಅರುಣ ಹೆಬ್ಬಾಳ, ಶಿವು ತಾಳಿಕೋಟಿ, ಶ್ರೀಶೈಲ ಸಜ್ಜನ ಇದ್ದರು.

# ಪ್ರಜ್ವಲ್ ರೇವಣ್ಣ ಹುಡುಕಿ ಕೊಟ್ಟವರಿಗೆ ನಗದು ಬಹುಮಾನ ಘೋಷಣೆ

ಉದಯರಶ್ಮಿ ನ್ಯೂಸ್




ಬೆಂಗಳೂರು: ಹಾಸನ ಸಂಸದ ಪ್ರಜ್ವಲ್ ರೇವಣ್ಣಗೆ ಸಂಬಂಧಿಸಿದೆ ಎನ್ನಲಾದ ಅಶ್ಲೀಲ ವಿಡಿಯೋಗಳಿರುವ ಪೆನ್‌ಡ್ರೈವ್ ಪ್ರಕರಣವು ದೇಶಾದ್ಯಂತ ಸದ್ದು ಮಾಡುತ್ತಿದೆ. ಇದೀಗ ಪ್ರಜ್ವಲ್ ರೇವಣ್ಣ ಅವರನ್ನು ಹುಡುಕಿಕೊಟ್ಟವ–ರಿಗೆ ನಗದು ಬಹುಮಾನ ಘೋಷಣೆ ಮಾಡಲಾಗಿದೆ.

ಜನತಾ ಪಕ್ಷವು ಪ್ರಜ್ವಲ್ ರೇವಣ್ಣ ನಾಪತ್ತೆ ಕುರಿತು ಕಿಡಿ ಕಾರಿದೆ. ಮಹಿಳೆಯರ ಮೇಲಿನ ಲೈಂಗಿಕ–ಮಾನಸಿಕ ದೌರ್ಜನ್ಯ ಹಾಗೂ ಪೆನ್‌ಡ್ರೈವ್ ಹಗರಣ–ಕ್ಕೆ ಸಂಬಂಧಿಸಿದಂತೆ ಹಾಸನದ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಪ್ರಕರಣ ದಾಖಲಾಗಿ ತನಿಖೆ ನಡೆಯುತ್ತಿದೆ ಅಷ್ಟೇ. ಪ್ರಜ್ವಲ್ ಇನ್ನೂ ಪತ್ತೆಯಾಗಿಲ್ಲ.

ಸದರಿ ಹಗರಣದಿಂದಾಗಿ ದೇಶಾದ್ಯಂತ ಮಾತ್ರವಲ್ಲದೆ, ಅಂತಾರಾಷ್ಟ್ರೀಯ ಮಟ್ಟದ ಹಗರಣವೆಂದು ಕುಖ್ಯಾತವಾಗಿದೆ. ಸದರಿ ಹಗರಣದಿಂದಾಗಿ ಹಾಸನ ಜಿಲ್ಲೆಯ, ಕರ್ನಾಟಕ ರಾಜ್ಯದ, ಸಮಸ್ತ ಕನ್ನಡಿಗರ ಘನತೆಗೆ ಧಕ್ಕೆ ಉಂಟಾಗಿದೆ. ಪ್ರಭಾವಿ ಕುಟುಂಬದ ಹಾಗೂ ಜನಪ್ರತಿನಿಧಿಯಾದ ವ್ಯಕ್ತಿಯೇ ಈ ರೀತಿ ಮಹಿಳೆಯರ ಮೇಲೆ ದೌರ್ಜನ್ಯ ಎಸಗಿರುವ ಆರೋಪ ಹೊತ್ತಿರುವುದು ನಿಜಕ್ಕೂ ನಾಚಿಕೆಗೇಡಿನ ವಿಷಯ ಎಂದು ಜನತಾ ಪಕ್ಷದ ರಾಜ್ಯ ಮಹಾಪ್ರಧಾನ ಕಾರ್ಯದರ್ಶಿ ನಾಗೇಶ್ ಎನ್ ದೂರಿದ್ದಾರೆ..

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಎಸ್ಸೆಸ್ಸೆಲ್ಸಿ ಫಲಿತಾಂಶ: ಚಿಮ್ಮಡ ವಿದ್ಯಾರ್ಥಿಗಳ ಸಾಧನೆ

ಉದಯರಶ್ಮಿ ನ್ಯೂಸ್

ಚಿಮ್ಮಡ: ಗ್ರಾಮದ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ರ‍್ಯಾಂಕ್ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ.

ಇಲ್ಲಿನ ಸರಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡಿ ಪರೀಕ್ಷೆಗೆ ಹಾಜರಾದ 156 ವಿದ್ಯಾರ್ಥಿಗಳಲ್ಲಿ 116 ವಿದ್ಯಾರ್ಥಿನಿಯರು ತೇರ್ಗಡೆ ಹೊಂದಿದ್ದು ಅದರಲ್ಲಿ15 ವಿದ್ಯಾರ್ಥಿನಿಯರು ಅತ್ಯತ್ತಮ ಶ್ರೇಣಿ 43 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದು ಶಾಲೆಯ ಒಟ್ಟು ಫಲಿತಾಂಶ ಶೇ. 74.35 ಪಡೆದಿದೆ ಎಂದು ಶಾಲೆಯ ಪ್ರಭಾರ ಮುಖ್ಯೋಪಾದ್ಯಾಯಿನಿ ಶ್ರೀಮತಿ ಎಂ.ಎಸ್. ಜಿಟ್ಟಿ ತಿಳಿಸಿದ್ದಾರೆ. ಕುಮಾರಿ ಭವಾನಿ ಕಾಡಪ್ಪಾ ನಿಂಬರಗಿ 625ಕ್ಕೆ 614 (ಶೇ. 98.24) ಕನ್ನಡ ವಿಷಯದಲ್ಲಿ ಶೇ 100 ಅಂಕಗಳಿಸುವ ಮೂಲಕ ಪ್ರೌಢಶಾಲೆಗೆ ಪ್ರಥಮ ಸ್ಥಾನ ಪಡೆದರೆ, ಕುಮಾರಿ ಸುಷ್ಮಾ ರಮೇಶ ಸಾವಳಗಿ 609 (ಶೇ. 97.44) ಅಂಕ ಪಡೆದು ಶಾಲೆಗೆ ದ್ವಿತೀಯ ಪಡೆದಿದ್ದು, ಕುಮಾರಿ ದಾನಮ್ಮ ಗುರುಪಾದಯ್ಯ ಹಳ್ಳದಮಠ 580 (92.80) ಪಡೆದು ಶಾಲೆಗೆ ತ್ರತೀಯ ಹಾಗೂ ಕುಮಾರಿ ಉಷಾ ಪುಂಡಲಿಕ ಬಳಗಾರ 581 (92.80) ಕುಮಾರಿ ಸ್ಫೂರ್ತಿ ರಾಮಪ್ಪಾ ಬಳಗಾರ 578 (92.48) ಕುಮಾರಿ ಸೌಮ್ಯ ಚನನಪ್ಪಾ ಗೋಕಾವಿ 577 ( 92.32) ಕುಮಾರಿ ಆಶಿಷಾ ಸೈಪನಸಾಬ ಜಮಖಂಡಿ 576 (92.16) ಕುಮಾರಿ ನಿರ್ಮಲಾ ಹೊನ್ನಪ್ಪ ಉರಭಿನವರ 572 (91.52) ಕುಮಾರಿ ಅನಿತಾ ದುಂಡಪ್ಪ ಕವಟಕೊಪ್ಪ 569 (91.04) ಕುಮಾರಿ ಸ್ನೇಹಾ ಶ್ರೀಶೈಲ ಬುರಡಿ 558 (89.28) ಕುಮಾರಿ ಗುರುದೇವಿ ನಂದೆಪ್ಪ ಮಾಡಲಗಿ 549 (87.84) ಕುಮಾರಿ ಪೂಜಾ ಮಹಾದೇವ ಬೆಳಗಲಿ 542 (86.72) ಕುಮಾರಿ ನಂದಾ ಬಸಪ್ಪಾ ಹುಕ್ಕೇರಿ 540 (86.40) ಕುಮಾರಿ ಪರೀತಿ ಬಸಪ್ಪಾ ಹತ್ತರಕಿ 538 (86.08) ಕುಮಾರಿ ಕುಸುಮಾ ಸಂಗಪ್ಪಾ ದೊಡಮನಿ 536 (85.76) ಅಂಕಗಳನ್ನು ಪಡೆದುಕೊಂಡು ಅತ್ಯುತ್ತಮ ಶ್ರೇಣಿಯಲ್ಲಿ ತೇರ್ಗಡೆ ಹೊಂದುವ ಮೂಲಕ ಉತ್ತಮ ಸಾಧನೆಗೈದಿದ್ದಾರೆ. ಗ್ರಾಮಕ್ಕೆ ಕೀರ್ತಿ ತಂದಿರುವ ಈ ವಿದ್ಯಾರ್ಥಿಗಳನ್ನು ಎಸ್‌ಡಿಎಂಸಿ ಅಧ್ಯಕ್ಷ ಮಾರುತಿ ಮಮದಾಪೂರ ಸದಸ್ಯರು ಶಾಲಾ ಶಿಕ್ಷಕರು, ಸ್ಥಳಿಯ ಗ್ರಾಮ ಪಂಚಾಯತಿ ಹಾಗೂ ಅರುಣೋದಯ ಗ್ರಾಮೀಣಾಭಿವೃದ್ದಿ ಸಂಘ, ಬಸವೇಶ್ವರ ಯುವಕ ಸಂಘದ ಪಧಾದಿಕಾರಿಗಳು ಅಭಿನಂದಿಸಿದ್ದಾರೆ.

# ಗೋಲಗೇರಿಯಲ್ಲಿ ವಿದ್ಯುತ್ ವ್ಯತ್ಯಯ

ಉದಯರಶ್ಮಿ ನ್ಯೂಸ್

ಬ್ರಹ್ಮದೇವನಮಡು: ಸಿಂದಗಿ ತಾಲೂಕಿನ 33/11ಕೆವಿ ವಿದ್ಯುತ್ ವಿತರಣಾ ಕೇಂದ್ರ ಗೋಲಗೇರಿಯಲ್ಲಿ ತುತು9 ನಿವ9ಹಣಾ ಕಾಮಗಾರಿ ಹಮ್ಮಿಕೊಂಡಿರುವುದ–ರಿಂದ ಕೆಲ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ವಿತರಣಾ ಕೇಂದ್ರದ ಮೇಲೆ ಬರುವ ಎಲ್ಲ ಗ್ರಾಮಗಳಿಗೆ ಮೆ.12ರಂದು ಬೆಳಗ್ಗೆ 9ಗಂಟೆಯಿಂದ ಸಂಜೆ 4 ಗಂಟೆವರೆಗೆ ವಿದ್ಯುತ್ ಪೂರೈಕೆ ಇರುವುದಿಲ್ಲ.ಆದ್ದರಿಂದ ಗ್ರಾಮಗಳ ಸಾವ9ಜನಿಕರು ಸಹಕರಿಸಬೇಕು ಎಂದು ಸಿಂದಗಿಯ ಹೆಸ್ಕಾಂ ಉಪವಿಭಾಗದ ಸಹಾಯಕ ನಿವಾ9ಹಕ ಅಭಿಯಂತರ ಚಂದ್ರಕಾಂತ ನಾಯಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದಯರಶ್ಮಿ ದಿನಪತ್ರಿಕೆ


## ಕಾವ್ಯರಶ್ಮಿ

– ಪೆರ್ಮುಖ ಸುಬ್ರಹ್ಮಣ್ಯ ಭಟ್

("ನಮ್ಮ ಕಥಾ ಅರಮನೆ" ಬರಹಗಾರರು)



## ಪಾರಿಜಾತ




ಹಾಲಲದ್ದಿದ ಬಿಳಿಯ ದಳಗಳು
ದಂಟು ಚಂದದ ಕೇಸರಿ
ಪರಮ ಪಾವನ ಪಾರಿಜಾತವು
ದೇವಲೋಕದ ಐಸಿರಿ

ದನುಜ ನರಕನು ಸುರರ ಸೋಲಿಸಿ
ದೇವಲೋಕದೆ ದಳ್ಳುರಿ
ಅವನ ಮುಗಿಸಲು ಸತ್ಯಭಾಮೆಯ
ನೆರವು ಪಡೆದನು ಶ್ರೀಹರಿ

ಮರಳಿ ಬರುತಿರೆ ಪಾರಿಜಾತದ
ಗಿಡವ ತಂದರು ಸಂಗಡ
ನೆಟ್ಟ ಗಿಡವದು ಬಾಗಿ ಹೂಗಳು
ಬಿತ್ತು ರುಕ್ಮಿಣಿ ಅಂಗಳ

ಇಂದು ಲೋಕದಿ ಕಾಣಸಿಗುವುದು
ಪಾರಿಜಾತದ ಮರಗಳು
ಗಂಧ ಬೀರುತ ಸೆಳೆದು ನಾಸಿಕ
ಮೆರೆವ ಸುಂದರ ಹೂಗಳು॥

# ಸಿಂದಗಿ: ಆಕ್ಸಫರ್ಡ ಪ್ರೌಢಶಾಲೆ ಅತ್ಯುತ್ತಮ ಫಲಿತಾಂಶ

ಉದಯರಶ್ಮಿ ನ್ಯೂಸ್

ಸಿಂದಗಿ: 2023–24ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆ–1ರ ಪಲಿತಾಂಶ ಗುರುವಾರ ಪ್ರಕಟವಾಗಿದ್ದು ಪಟ್ಟಣದ ಶ್ರೀ ವೇಂಕಟೇಶ್ವರ ವಿದ್ಯಾವರ್ಧಕ ಸಂಘದ ಆಕ್ಸಫರ್ಡ ಆಂಗ್ಲ ಮಾಧ್ಯಮ ಪ್ರೌಢಶಾಲೆ ಮತ್ತು ಶ್ರೀ ಎಚ್.ಟಿ.ಕೆ. (ಚೌಧರಿ) ಕನ್ನಡ ಮಾಧ್ಯಮ ಪ್ರೌಢಶಾಲೆಯ ಎಸ್ಸೆಸ್ಸೆಲ್ಸಿ ಒಟ್ಟು ಫಲಿತಾಂಶ ಶೇ.100 ರಷ್ಟಾಗಿದೆ.

ಆಕ್ಸಫರ್ಡ ಆಂಗ್ಲ ಮಾಧ್ಯಮ ಪ್ರೌಢಶಾಲೆ: ವಿದ್ಯಾರ್ಥಿನಿ ಪವಿತ್ರಾ ದೇವರಮನಿ 618 ಅಂಕಗಳನ್ನು ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಪರೀಕ್ಷೆ ಬರೆದ 69 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. 42 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ, 27 ಉತ್ತಮ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ಪವಿತ್ರಾ ದೇವರಮನಿ 618, ರಾಧಿಕಾ ಕಣಮೇಶ್ವರ 606, ಮೇಘಾ ಕುಂಬಾರ 604, ಅಕ್ಷಯ ತಾಳಿಕೋಟಿ 597, ಭೂವನೇಶ್ವರಿ ಗೋನಾಳ 597, ಪ್ರಶಾಂತ ಬಿರಾದಾರ 597, ವೈಶಾಲಿ ಮಳಲಿ 595, ಗೌತಮ ಬಡಿಗೇರ 590, ಪ್ರಜ್ವಲ್ ಬಡಿಗೇರ 586, ಆಕಾಶ ಬಿರದಾರ 583 ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದಾರೆ

ಶ್ರೀ ಎಚ್.ಟಿ.ಕೆ.(ಚೌಧರಿ) ಕನ್ನಡ ಮಾಧ್ಯಮ ಪ್ರೌಢಶಾಲೆ: ಪರೀಕ್ಷೆ ಬರೆದ 25 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. 20 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ, 5 ಉತ್ತಮ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ಗಂಗಮ್ಮ ಬಿರಾದಾರ 581, ಸುಮಯ್ಯ ನಾಟಿ–ಕಾರ 577, ಪವಿತ್ರಾ ಅರಳಗುಂಡಗಿ 575, ಭಾಗ್ಯಶ್ರೀ ಪೋಲಿಸ್‌ಪಾಟೀಲ 574, ಸಮರ್ಥ ಅಲ್ಲಾಪೂರ 574, ಪ್ರೀಯಾ ಹಿಪ್ಪರಗಿ 571, ಆಕಾಶ ಪೂಜಾರಿ 569 ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಪ್ರಕಾಶ ಚೌಧರಿ, ಆಡಳಿತಾಧಿಕಾರಿ ಮಹಾಂತೇಶ ಚೌಧರಿ, ಮುಖ್ಯೋಪಾಧ್ಯಾಯ ವಿಶ್ವನಾಥ ಯಾತ್ನೂರ ಹಾಗೂ ಸಿಬ್ಬಂದಿ ವರ್ಗ ಹರ್ಷ ವ್ಯಕ್ತಪಡಿಸಿದ್ದಾರೆ.



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR